ಸಂಪುಟ 01 | ಸಂಚಿಕೆ 135 | ಶುಕ್ರವಾರ 03 ಏಪ್ರಿಲ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಶುಭ ಶುಕ್ರವಾರ**

ಯೇಸುಕ್ರಿಸ್ತನ ಶಿಲುಬೆಗೇರಿಸುವಿಕೆಯನ್ನು ಸ್ಮರಿಸುವ ಮಹತ್ವದ ಕ್ರಿಶ್ಚಿಯನ್ ಆಚರಣೆಯು ಶುಭ ಶುಕ್ರವಾರವಾಗಿದೆ. ಇದು ಪ್ರಪಂಚದಾದ್ಯಂತದ ಅನೇಕ ವಿಶ್ವಾಸಿಗಳಿಗೆ ಪ್ರಾರ್ಥನೆ, ಧ್ಯಾನ ಮತ್ತು ಉಪವಾಸದ ಗಂಭೀರ ದಿನವಾಗಿದೆ.

**2) ಛತ್ರಪತಿ ಶಿವಾಜಿ ಮಹಾರಾಜರ ಪುಣ್ಯಸ್ಮರಣೆ**

ಹಿಂದವಿ ಸ್ವರಾಜ್ಯದ ಸ್ಥಾಪಕ, ಶೌರ್ಯ ಮತ್ತು ಸಾಹಸದ ಸಂಕೇತ ಛತ್ರಪತಿ ಶಿವಾಜಿ ಮಹಾರಾಜರ ಪುಣ್ಯಸ್ಮರಣೆ (ಏಪ್ರಿಲ್ 3, 1680). ಮಹಾರಾಷ್ಟ್ರದ ರಾಯಗಡ ಕೋಟೆಯಲ್ಲಿ ನಿಧನರಾದ ಈ ಮಹಾನ್ ನಾಯಕನ ಆದರ್ಶಗಳು, ರಾಷ್ಟ್ರಪ್ರೇಮ ಮತ್ತು ನ್ಯಾಯಪರ ಆಡಳಿತ ಇಂದಿಗೂ ಕೋಟ್ಯಂತರ ಜನರಿಗೆ ಪ್ರೇರಣೆಯಾಗಿದೆ. ದೇಶ, ಧರ್ಮ ಹಾಗೂ ಸ್ವರಾಜ್ಯಕ್ಕಾಗಿ ಅವರು ಮಾಡಿದ ತ್ಯಾಗವನ್ನು ಸ್ಮರಿಸಿ, ಅವರಿಗೆ ಶತಶತ ನಮನಗಳನ್ನು ಸಲ್ಲಿಸಲಾಗುತ್ತದೆ

## ಸುಭಾಷಿತ

ಆರೋಗ್ಯ ಎಂಬುದು ದೊಡ್ಡ ಕೊಡುಗೆ,
ಸಂತೃಪ್ತಿ ಎಂಬುದು ದೊಡ್ಡ ಸಂಪತ್ತು ಹಾಗೂ
ವಿಶ್ವಾಸಾರ್ಹತೆ ಎಂಬುದು ಅತ್ಯುತ್ತಮ ಸಂಬಂಧ.

ಗೌತಮ ಬುದ್ಧ

## ದೇಶದಲ್ಲೇ ಮೊದಲ ನಕ್ಸಲ್ ಮುಕ್ತ ರಾಜ್ಯ ಕರ್ನಾಟಕ

# ಗೃಹ ಸಚಿವ ಪರಮೇಶ್ವರ್

**ಬೆಂಗಳೂರು:** ಬಹಳ ವರ್ಷಗಳ ಹಿಂದೆಯೇ ಆ್ಯಂಟಿ ನಕ್ಸಲ್ ಫೋರ್ಸ್ ಸ್ಥಾಪಿಸುವ ಮೂಲಕ ದೇಶದಲ್ಲೇ ಮೊದಲು ಕರ್ನಾಟಕವನ್ನು ನಾವು ನಕ್ಸಲ್ ಮುಕ್ತ ರಾಜ್ಯವನ್ನಾಗಿ ಮಾಡಿದ್ದೇವೆ ಎಂದು ಗೃಹ ಸಚಿವರಾದ ಡಾ. ಜಿ.ಪರಮೇಶ್ವರ್ ಹೇಳಿದರು.

ಕೋರಮಂಗಲದ ಕೆಎಸ್ಆರ್‌ಪಿ ಪರೇಡ್ ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಹಾಗೂ ಮುಖ್ಯಮಂತ್ರಿಗಳ ಪದಕ ಪ್ರದಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಪದಕ ಪುರಸ್ಕೃತರನ್ನು ಉದ್ದೇಶಿಸಿ ಮಾತನಾಡಿದ ಅವರು, ಕೇಂದ್ರ ಗೃಹಸಚಿವರು ದೇಶವನ್ನು ನಕ್ಸಲ್ ಮುಕ್ತ ಮಾಡಿದ್ದೇವೆ ಎಂದು ಹೇಳಿದ್ದಾರೆ. ಆದರೆ ಮೊದಲು ನಕ್ಸಲ್ ಮುಕ್ತ ರಾಜ್ಯ ಮಾಡಿದ್ದು ನಾವು ಎಂದರು. ಕರ್ನಾಟಕ ಪೊಲೀಸ್ ಇಲಾಖೆ ದೇಶದಲ್ಲೇ ಅತ್ಯಂತ ಉತ್ತಮವಾದ ಪೊಲೀಸ್ ವ್ಯವಸ್ಥೆ ಎಂಬ ಬಿರುದಿಗೆ ಪಾತ್ರವಾಗಿದೆ. 1965ರ ಏ.2ರಂದು ಪೊಲೀಸ್ ಕಾಯ್ದೆಯನ್ನು ಜಾರಿಗೊಳಿಸುವ ಮೂಲಕ ರಾಜ್ಯ ಪೊಲೀಸರನ್ನು ಒಟ್ಟುಗೂಡಿಸಿ, ಶಿಸ್ತಿನಿಂದ ನಡೆಸುವ ಸಂದರ್ಭವನ್ನು ಪೊಲೀಸ್ ಧ್ವಜ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ ಶಾಂತಿ, ನೆಮದಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಇಂಡಿಯಾ ಜಸ್ಟೀಸ್ ವರದಿ ಪ್ರಕಾರ ದೇಶದಲ್ಲಿ ನೊಂದವರಿಗೆ ನ್ಯಾಯ ನೀಡುವುದರಲ್ಲಿ ಕರ್ನಾಟಕ ಮೊದಲ ಸ್ಥಾನದಲ್ಲಿದೆ ಎಂಬುದು ಗೊತ್ತಾಗಿದೆ. ವಿಶೇಷವಾಗಿ ನ್ಯಾಯ



ಒದಗಿಸುವುದರಲ್ಲಿ ಪೊಲೀಸ್ ಇಲಾಖೆ ಉತ್ತಮ ಕೆಲಸ ಮಾಡಿದೆ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ಕೇಂದ್ರ ಗೃಹ ಇಲಾಖೆಯು ರಾಯಚೂರು ಜಿಲ್ಲೆಯ ಕವಿತಾಳ ಪೊಲೀಸ್ ಠಾಣೆ ದೇಶದ 3ನೇ ಅತ್ಯುತ್ತಮ ಪೊಲೀಸ್ ಠಾಣೆ ಎಂದು ಗುರುತಿಸಿದೆ. ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲ ಪೊಲೀಸ್ ಠಾಣೆಗಳು, ಕವಿತಾಳ ಪೊಲೀಸ್ ಠಾಣೆಯಂತೆಯೇ ಅತ್ಯುತ್ತಮ ಪೊಲೀಸ್ ಠಾಣೆಗಳಾಗಬೇಕೆಂದು ಸರ್ಕಾರ ಬಯಸುತ್ತದೆ ಎಂದರು.

ಪೊಲೀಸ್ ಇಲಾಖೆಯು ಪ್ರತಿನಿತ್ಯ ಸವಾಲುಗಳನ್ನು ಎದುರಿಸುತ್ತದೆ. ಸವಾಲುಗಳ ಮಧ್ಯೆ ಕಳೆದ ಮೂರು ವರ್ಷಗಳಿಂದ ನಮ ಸರ್ಕಾರ, ಮುಖ್ಯಮಂತ್ರಿಗಳ ನೇತೃತ್ವದಲ್ಲಿ ರಾಜ್ಯದಲ್ಲಿ ಶಾಂತಿ ಕಾಪಾಡುವುದರಲ್ಲಿ ಯಶಸ್ವಿಯಾಗಿದೆ. ರಾಜ್ಯಕ್ಕೆ ಬಂಡಾವಾಳ ಹೂಡಿಕೆಗೆ ಬರುವ ಜನ ಶಾಂತಿ–ನೆಮದಿ ಬಯಸುತ್ತಾರೆ. ರಾಜ್ಯದಲ್ಲಿ ಸೌಹಾರ್ದಯುತ ವಾತಾವರಣ ಸೃಷ್ಟಿ ಮಾಡುವುದರಲ್ಲಿ ಪೊಲೀಸ್ ಇಲಾಖೆ ಯಶಸ್ವಿಯಾಗಿದೆ ಎಂದು ಅವರು ಹೇಳಿದರು. ಕರ್ತವ್ಯದ ವೇಳೆ ಇಲಾಖೆಗೆ ಚ್ಯುತಿ ಬಾರದಂತೆ ಅತ್ಯಂತ ಕ್ಷಿಪ್ರವಾಗಿ ಅಪರಾಧಗಳನ್ನು ಪತ್ತೆಹಚ್ಚುವುದನ್ನು ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ತೋರಿಸಿಕೊಟ್ಟಿದ್ದಾರೆ. ಕಾರ್ಯದಕ್ಷತೆಗೆ, ಸಾಮರ್ಥ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸುತ್ತೇನೆ ಎಂದರು.

ರಾಜ್ಯದಲ್ಲಿ ಡ್ರಗ್ಸ್ ಜಾಲವನ್ನು ಸಂಪೂರ್ಣವಾಗಿ ಮಟ್ಟ ಹಾಕಲು ನಮ ಸರ್ಕಾರ ಮುಂದಾಗಿದ್ದು, ಡ್ರಗ್ಸ್ ಮುಕ್ತ ಕರ್ನಾಟಕ ಮಾಡುವುದಾಗಿ ಮುಖ್ಯಮಂತ್ರಿಗಳು ಘೋಷಣೆ ಮಾಡಿದ್ದಾರೆ. ಕಳೆದ ಮೂರು ವರ್ಷಗಳಲ್ಲಿ ಸಾವಿರಾರು ಕೋಟಿ ರೂ. ಮೌಲ್ಯದ ಮಾದಕ ದ್ರವ್ಯ ಪತ್ತೆಹಚ್ಚುವ ಮೂಲಕ ದಂಧೆಯಲ್ಲಿ ತೊಡಗಿದ ಅನೇಕ ಆರೋಪಿಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದರು. ದೇಶದಲ್ಲಿ ಸೈಬರ್ ಕ್ರೈಂ ಹಾವಳಿ ಹೆಚ್ಚಾಗುತ್ತಿದೆ. ದೇಶದಲ್ಲೇ ಮೊಟ್ಟ ಮೊದಲ ಬಾರಿಗೆ ಕರ್ನಾಟಕವೂ ಸೈಬರ್ ಕಮಾಂಡ್ ಯೂನಿಟ್ ಸ್ಥಾಪಿಸಿ, ಡಿಜಿ ಶ್ರೇಣಿಯ ಅಧಿಕಾರಿಯನ್ನು ನೇಮಿಸಿದೆ.

ಸೈಬರ್ ಕಮಾಂಡ್ ಯೂನಿಟ್‌ಗೆ ಹೆಚ್ಚು ಪ್ರೋತ್ಸಾಹ ನೀಡುವ ಮೂಲಕ ಸೈಬರ್ ಅಪರಾಧಗಳನ್ನು ಕಡಿಮೆ ಮಾಡುವುದರಲ್ಲಿ ಯಶಸ್ವಿಯಾಗಿದ್ದೇವೆ ಎಂದು ತಿಳಿಸಿದರು. ಆಧುನಿಕತೆ ಸವಾಲುಗಳನ್ನು ಎದುರಿಸಲು ಎಲ್ಲ ಹಂತದಲ್ಲಿಯೂ ತರಬೇತಿ ಪಡೆಯುವ ಮೂಲಕ ಕಾರ್ಯಕ್ಷಮತೆ ಹೆಚ್ಚಿಸಿಕೊಂಡು ಕೆಲಸ ಮಾಡಬೇಕಿದೆ ಎಂದು ಅವರು ಹೇಳಿದರು. ಪೊಲೀಸ್ ಇಲಾಖೆಯಲ್ಲಿ ವರ್ಗಾವಣೆ, ನೇಮಕಾತಿಯಲ್ಲಿ ಆಧುನಿಕತೆಯನ್ನು ಬಳಸಿಕೊಳ್ಳಲಾಗುವುದು. 8 ಸಾವಿರ ಕಾನ್‌ಸ್ಟೇಬಲ್, 600 ಪಿಎಸ್ಐ ಹುದ್ದೆ ನೇಮಕಾತಿಗೆ ಮುಖ್ಯಮಂತ್ರಿಗಳು ಬಜೆಟ್‌ನಲ್ಲಿ ಅನುವು ಮಾಡಿಕೊಟ್ಟಿದ್ದಾರೆ.

## ಹುಲ್ಲೂರಿನ ಹಜರತ್ ಬಾಲೆಪೀರ ದರ್ಗಾ ಜಾತ್ರಾ ಮಹೋತ್ಸವ

ನೈಜ್ಯ ದೆಸೆ ನ್ಯೂಸ್

**ಜೇವರ್ಗಿ: ತಾಲೂಕಿನ ಹುಲ್ಲೂರ ಗ್ರಾಮದ ಆರಾಧ್ಯ ದೈವನಾಗಿರುವ ಹಜರತ್ ಬಾಲೆಪೀರ ದರ್ಗಾ ಜಾತ್ರಾ ಮಹೋತ್ಸವವು ಮೂರು ದಿನಗಳ ಕಾಲ ವಿಜೃಂಭಣೆಯಿಂದ ಜರುಗಲಿದೆ. ಏ.8,2026 ಬುಧುವಾರ ರಾತ್ರಿ 8 ಗಂಟೆಗೆ ಗಂಧವು ದೇವರ ಮನೆಯಿಂದ ಪ್ರಾರಂಭಗೊಂಡು ಊರಿನ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡುತ್ತ ರಾತ್ರಿ 11 ಗಂಟೆಗೆ ದರ್ಗಾಕ್ಕೆ ಬಂದು ತಲುಪುವುದು, ನಂತರ ಊರಿನ ಪ್ರಮುಖರು ಗಂಧವನ್ನು ಏರಿಸುವರು.**



ದಿ.9–4–2026 ಗುರುವಾರದಂದು ದೀಪೋತ್ಸವ ಕಾರ್ಯಕ್ರಮವಿದ್ದು ಊರಿನ ಹಾಗೂ ಪರಸ್ಥಳಗಳಿಂದ ಭಕ್ತರು ದೇವರಿಗೆ ನೈವಿದ್ಯ ಹಿಡಿದು ತಮ್ಮ ಭಕ್ತಿ ಮುಟ್ಟಿಸುವರು. ದಿ.10–4–2026 ಶುಕ್ರವಾರದಂದು ಸಾಯಂಕಾಲ 4 ಗಂಟೆಗೆ ನಾಡಿನ ಹೆಸರಾಂತ ಪೈಲ್ವಾನರಿಂದ ಜಂಗಿ ಕುಸ್ತಿ ಜರುಗುವುದು. ಕೊನೆಯದಾಗಿ ಗೆದ್ದ ಕುಸ್ತಿಪಟುವಿಗೆ ಬೆಳ್ಳಿ ಖಡೆ ಹಾಗೂ ನಗದು ಬಹುಮಾನ ನೀಡುವರು. ಜಾತ್ರೆಗೆ ಆಗಮಿಸುವ ಭಕ್ತಾದಿಗಳಿಗೆ ಜೇರಟಗಿಯಿಂದ ಬರಲು ಬಸ್ಸಿನ ಸೌಕರ್ಯವಿದೆ. ಜಾತ್ರೆಗೆ ಸುತ್ತಮುತ್ತಲಿನ ಗ್ರಾಮಸ್ಥರು ಆಗಮಿಸಿ ದೇವರ ಆಶೀರ್ವಾದವನ್ನು ಪಡೆದುಕೊಳ್ಳಬೇಕು ಎಂದು ಸಮಸ್ತ ಹುಲ್ಲೂರ ಗ್ರಾಮಸ್ಥರು ಹಾಗೂ ಜಾತ್ರಾ ಕಮಿಟಿ ಕೋರಿದೆ.

## ಡಾ.ಬಿ.ಜೆ.ಆರ್ ಜಯಂತಿ: ಪೂರ್ವ ಭಾವಿ ಸಭೆ




ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ತಾಲೂಕ ಆಡಳಿತ, ತಾಲೂಕು ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಮುದ್ದೇಬಿಹಾಳ ಹಾಗೂ ಪುರಸಭೆ ತಾಳಿಕೋಟಿ ಇವರ ಸಂಯುಕ್ತ ಆಶ್ರಯದಲ್ಲಿ ಏಪ್ರಿಲ್ 5 ರಂದು ಆಚರಿಸಲಿರುವ ಡಾ.ಬಾಬು ಜಗಜೀವನ ರಾಮ್ ಜಯಂತಿಯನ್ನು ಯಶಸ್ವಿಗೊಳಿಸುವ ಕುರಿತು ಸಮಾಜ ಬಾಂಧವರ ಪೂರ್ವಭಾವಿ ಸಭೆ ಗುರುವಾರ ಪ್ರವಾಸಿ ಮಂದಿರದಲ್ಲಿ ಜರುಗಿತು.**

ಈ ಸಂದರ್ಭದಲ್ಲಿ ಅಂಬೇಡ್ಕರ್ ಸೇನೆ ತಾಲೂಕ ಘಟಕದ ಅಧ್ಯಕ್ಷರಾದ ಗೋಪಾಲ ಕಟ್ಟಿಮನಿ ಹಾಗೂ ರಮೇಶ ವಾಯ್. ದೊಡಮನಿ (ಸಾಸನೂರ) ಅವರು ಮಾತನಾಡಿ ಏಪ್ರಿಲ್ 5ರಂದು ನಡೆಯಲಿರುವ ಮಾಜಿ ಉಪ ಪ್ರಧಾನಿ ಹಸಿರು ಕ್ರಾಂತಿಯ ಹರಿಕಾರ ರಾದ ಡಾ.ಬಾಬು ಜಗಜೀವನ್ ರಾಮ್ ಅವರ 119 ನೇ ಜಯಂತಿಯನ್ನು ತಾಲೂಕ ಆಡಳಿತ ಅದ್ದೂರಿಯಾಗಿ ನಡೆಸಲು ತೀರ್ಮಾನಿಸಿದ್ದು ಇದರ ಅಂಗವಾಗಿ ಬೃಹತ್ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮ ಜರುಗಲಿದೆ ಇದರ ಯಶಸ್ವಿಗೆ ನಮ್ಮ ಸಮಾಜದ ಪಟ್ಟಣ ಹಾಗೂ ಸುತ್ತಮುತ್ತಲಿನ ಹಳ್ಳಿಗಳ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಲು ಸಹಕಾರ ನೀಡಬೇಕೆಂದು ಕೇಳಿಕೊಂಡರು.

ಸದರಿ ಸಭೆಯಲ್ಲಿ ಕಾರ್ಯಕ್ರಮದ ಯಶಸ್ವಿಗೆ ಅಗತ್ಯವಾಗಿರುವ ಕ್ರಮಗಳ ಕು–ರಿತು ಚರ್ಚಿಸಲಾಯಿತು. ಈ ಸಮಯದಲ್ಲಿ ಸಮಾಜದ ಪ್ರಮುಖರಾದ ಬಸ್ಸು ಮಾದರ, ರಮೇಶ ಸಿ.ಮಾದರ (ಹಡಗಿನಾಳ), ದ್ಯಾಮಣ್ಣ ಸೋಮನಾಳ (ಕೊಣ್ಣೂರ), ಮಲ್ಲಪ್ಪ ಶಿರೋಳ, ದುರ್ಗೇಶ ವಂದಗನೂರ (ಬಿ.ಸಾಲವಾಡಗಿ), ಶೇಖಪ್ಪ ಕಟ್ಟಿಮನಿ(ಕಾರಗನೂರ), ಶ್ರೀಕಾಂತ ಹಳ್ಳಿ (ಬಿ.ಸಾಲವಾಡಗಿ) ಮತ್ತಿತರರು ಇದ್ದರು.

## ವೇ.ಮೂ.ಮುರಗೇಶ ವಿರಕ್ತಮಠಗೆ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ಜರುಗಿದ ಶ್ರೀ ಬಂಡಿ ಬಸವೇಶ್ವರ ನೂತನ ರಥದ ಉದ್ಘಾಟನಾ ಸಮಾರಂಭದಲ್ಲಿ ಶ್ರೀ ಖಾಸ್ಗತೇಶ್ವರ ಮಠದ ಮುಖ್ಯಸ್ಥರಾದ ವೇದ ಮೂರ್ತಿ ಮುರಗೇಶ ವಿರಕ್ತಮಠ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.**



ಈ ಸಮಯದಲ್ಲಿ ಕಲ್ಬುರ್ಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮ್ ಪ್ರಭು ಪಾಟೀಲ, ದೇವರ ಹಿಪ್ಪರಗಿ ಮತಕ್ಷೇತ್ರ ಶಾಸಕ ರಾಜುಗೌಡ ಪಾಟೀಲ (ಕು.ಸಾಲವಾಡಗಿ), ಜೆಡಿ–ಎಸ್ ತಾಲೂಕಾ ಅಧ್ಯಕ್ಷ ಮಡುಸೌಕಾರ ಬಿರಾದಾರ, ಬಾಪುಗೌಡ ಸಂಗನಗೌಡ ಅಶೋಕಗೌಡ ಸಂ.ಪಾಟೀಲ,ರಾಜುಗೌಡ ಪಾಟೀಲ, ಶರಣಗೌಡ ಸಂ. ಪಾಟೀಲ, ಸಂ.ಪಾಟೀಲ ಮತ್ತಿತರರು ಇದ್ದರು.

## ಮಸ್ಕಿ: ಮೌನೇಶ್ವರರ ಜೋಡು ಪಲ್ಲಕ್ಕಿ ಮೆರವಣಿಗೆ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಎರಡನೇ ತಿಂತಣಿ ಕ್ಷೇತ್ರ ಎಂದು ಪ್ರಸಿದ್ಧಿ ಪಡೆದ ಪಟ್ಟಣದ ಮೌನೇಶ್ವರರ ಜೋಡು ಪಲ್ಲಕ್ಕಿ ಮೆರವಣಿಗೆ ಗುರುವಾರ ಪ್ರಮುಖ ಬೀದಿಗಳಲ್ಲಿ ವೈಭವದಿಂದ ನಡೆಯಿತು.**



ಬೆಳಿಗ್ಗೆ ಮುದಗಲ್ ರಸ್ತೆಯಲ್ಲಿನ ಶ್ರೀ ಜಗದ್ಗುರು ಮೌನೇಶ್ವರರ ದೇವಸ್ಥಾನದಲ್ಲಿ ಅಭಿಷೇಕ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳ ನಡೆದವು. ನಂತರ ದೇವಸ್ಥಾನದಿಂದ ಜೋಡು ಪಲ್ಲಕ್ಕಿ ಮೆರವಣಿಗೆ ಆರಂಭವಾಯಿತು. ಅಶೋಕ ವೃತ್ತ, ಮುಖ್ಯ ಬಜಾರ ಸಂಜೆ ಬಜಾರ ಮೂಲಕ ಸಾಗಿ ರಾತ್ರಿ ಪುನಃ ಮೌನೇಶ್ವರರ ದೇವಸ್ಥಾನಕ್ಕೆ ಆಗಮಿಸಿತು. ಜಯಘೋಷಗಳ ನಡುವೆ ಗುಹೆ ಪ್ರವೇಶ ಕಾರ್ಯಕ್ರಮ ನಡೆಯಿತು.

ಪುರವಂತರ ಸೇವೆ, ನಂದಿಕೋಲ ಕುಣಿತ ಸೇರಿದಂತೆ ವಿವಿಧ ಜಾನಪದ ಕಲಾ ತಂಡಗಳು ಮೆರವಣಗೆ ಮೆರಗು ನೀಡಿದವು. ಮಹಿಳೆಯರು ಕುಂಭ ಹಾಗೂ ಕಳಸದೊಂದಿಗೆ ಪಾಲ್ಗೊಂಡಿದ್ದರು. ಮೌನೇಶ್ವರರ ದೇವಸ್ಥಾನದ ಧರ್ಮಾಧಿಕಾರಿ ಮೌನೇಶ ತಾತ ಸೇರಿದಂತೆ ವಿಶ್ವಕರ್ಮ ಸಮಾಜದ ಮುಖಂಡರು, ಸ್ಥಳೀಯರು ಭಾಗವಹಿಸಿದ್ದರು.

## ಹೊಸಳ್ಳಿ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ಹೊಸಳ್ಳಿ ಇ.ಜೆ. ಗ್ರಾಮದ ಮೊದಲನೇ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲಾಯಿತು. ಈ ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾ–ರಿಯಾದ ಗೀತಾ ಹಿರೇಮಠ್ ಅವರು ಭಾಗವಹಿಸಿ ತಾಯಂದಿರು ಹಾಗೂ ಗರ್ಭಿಣಿಯರನ್ನು ಉದ್ದೇಶಿಸಿ ಆರೋಗ್ಯ ಜಾಗೃತಿ ಮೂಡಿಸಿದರು.**



ವಿಶೇಷವಾಗಿ ರಕ್ತಹೀನತೆ ಸಮಸ್ಯೆ ಹಾಗೂ ಬೇಸಿಗೆ ಕಾಲದಲ್ಲಿ ತಾಯಿ–ಮಕ್ಕಳ ಆರೋಗ್ಯ ರಕ್ಷಣೆಗೆ ತೆಗೆದುಕೊಳ್ಳಬೇಕಾದ ಮುನ್ನೆಚ್ಚ–ರಿಕೆ ಕ್ರಮಗಳ ಕುರಿತು ವಿವರವಾಗಿ ತಿಳಿಸಿದರು. ಬೇಸಿಗೆ ಸಂದರ್ಭದಲ್ಲಿ ಮಕ್ಕಳ ಆರೋಗ್ಯ ಸುರಕ್ಷತೆ ಅತ್ಯಂತ ಮುಖ್ಯವಾಗಿದ್ದು, ಮಕ್ಕಳಿಗೆ ಸಾಕಷ್ಟು ನೀರು ಹಾಗೂ ದ್ರವ ಪದಾರ್ಥಗಳನ್ನು ನೀಡುವ ಮೂಲಕ ದೇಹವನ್ನು ಹೈಡ್ರೇಟ್ ಆಗಿಡಬೇಕು ಎಂದು ತಿಳಿಸಿದರು. ಸಡಿಲವಾದ ಹತ್ತಿ ಬಟ್ಟೆಗಳನ್ನು ಧ–ರಿಸುವುದು, ಬೆಳಿಗ್ಗೆ 11 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ನೇರ ಬಿಸಿಲಿನಿಂದ ದೂರವಿ–ರಿಸುವುದು, ನಿಯಮಿತವಾಗಿ ಸ್ನಾನ ಮಾಡಿಸುವುದು ಹಾಗೂ ಚರ್ಮದ ರಕ್ಷಣೆಗೆ ಅಗತ್ಯವಿದ್ದಲ್ಲಿ ಸನ್‌ಸ್ಕ್ರೀನ್ ಬಳಕೆ ಮಾಡಬೇಕು ಎಂದು ಸಲಹೆ ನೀಡಿದರು.

ಮಕ್ಕಳಲ್ಲಿ ಸೋಂಕು ತಡೆಗಟ್ಟಲು ಕುದಿಸಿ ಆರಿಸಿದ ನೀರನ್ನು ಕುಡಿಸುವುದು ಅಗತ್ಯವೆಂದು ತಿಳಿಸಿದ ಅವರು, ಆರು ತಿಂಗಳಿಗಿಂತ ಮೇಲ್ಪಟ್ಟ ಮಕ್ಕಳಿಗೆ ನೀರು, ಎಳೆನೀರು, ಹಣ್ಣಿನ ರಸ ಹಾಗೂ ಮಜ್ಜಿಗೆ ನೀಡುವಂತೆ ಸೂಚಿಸಿದರು. ಸ್ತನ್ಯಪಾನ ಮಾಡುವ ಶಿಶುಗಳಿಗೆ ಹೆಚ್ಚಾಗಿ ತಾಯಿಹಾಲುಣಿಸುವುದು ಅತ್ಯಂತ ಮುಖ್ಯ ಎಂದು ಹೇಳಿದರು. ಮಧ್ಯಾಹ್ನದ ಕಡು ಬಿಸಿಲಿನಲ್ಲಿ ಹೊರಾಂಗಣ ಆಟಗಳನ್ನು ತಪ್ಪಿಸುವುದು, ಮಕ್ಕಳಿಗೆ ಟೋಪಿ ಹಾಗೂ ಛತ್ರಿ ಬಳಸುವುದು, ತಂಪಾದ ವಾತಾವರಣದಲ್ಲಿ ಇರಿಸುವುದು ಹಾಗೂ ಬೆವರು ದದ್ದುಗಳನ್ನು ತಡೆಗಟ್ಟಲು ಉಗುರು ಬೆಚ್ಚಗಿನ ನೀರಿನಲ್ಲಿ ಸ್ನಾನ ಮಾಡಿಸುವುದು ಆರೋಗ್ಯಕರ ಕ್ರಮಗಳಾಗಿವೆ ಎಂದು ತಿಳಿಸಿದರು.

ಈ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವುದರಿಂದ ನಿರ್ಜಲೀಕರಣ, ಶಾಖಾಘಾತ ಹಾಗೂ ಚರ್ಮದ ಸಮಸ್ಯೆಗಳಿಂದ ಮಕ್ಕಳನ್ನು ರಕ್ಷಿಸಬಹುದು ಎಂದು ಹೇಳಿದರು. ಇದೇ ವೇಳೆ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ಮಹತ್ವವನ್ನು ವಿವರಿಸಿ, ಮಕ್ಕಳಿಗೆ ನೀಡಲಾಗುವ ಲಸಿಕೆಗಳು ಸುಮಾರು 12 ಮಾರಕ ರೋಗಗಳಿಂದ ರಕ್ಷಣೆ ನೀಡುತ್ತವೆ. ಯಾವುದೇ ಮಗು ಲಸಿಕೆ ವಂಚಿತವಾಗದಂತೆ ಎಲ್ಲಾ ತಾಯಂದಿರು ಜಾಗೃತಿ ವಹಿಸಿ ಲಸಿಕೆಗಳನ್ನು ಕಡ್ಡಾಯವಾಗಿ ಹಾಕಿಸಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪಿಎಚ್‌ಸಿಇಓ ನಿಂಗಮ್ಮ, ಎಚ್‌ಐಓ ಮಲ್ಲಿಕಾರ್ಜುನ, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ತಾಯಂದಿರು ಹಾಗೂ ಗರ್ಭಿಣಿಯರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಪ್ರೀತಿಯ ರೂಪವಾಗಿ ಬಂದನು ಭುವಿಗೆ,
ಪಾಪದ ಕತ್ತಲಲ್ಲಿ ಬೆಳಕಾಗಿ ನಿಂತನು.
ದುಃಖದ ಹೃದಯಗಳಿಗೆ ಆಶ್ವಾಸನೆ ನೀಡಿ,
ಕರುಣೆಯ ಸಂದೇಶವನ್ನು ಲೋಕಕ್ಕೆ ಹರಿಸಿದನು.

ಮುಗಿಲಿಗಿಂತ ಎತ್ತರವಾದ ಅವನ ದಯೆ,
ಸಾಗರಕ್ಕಿಂತ ಆಳವಾದ ಅವನ ಪ್ರೀತಿ.
ಕ್ರೂಶಿನ ಮೇಲೆ ನೋವು ತಾಳಿದರೂ,
ಮಾನವನಿಗಾಗಿ ಕ್ಷಮೆಯ ಮಾತು ಹೇಳಿದನು.

ಹಸಿದವರ ಕೈ ಹಿಡಿದನು,
ಅಳುವವರ ಕಣ್ಣೀರ ಒರೆಸಿದನು.
ಸತ್ಯದ ದಾರಿಯನ್ನು ತೋರಿಸಿದ ಗುರು,
ಶಾಂತಿಯ ಬೀಜವನ್ನು ಬಿತ್ತಿದನು.

ಏಸು ಕ್ರಿಸ್ತನೇ ನಮ್ಮ ಆಶಾಕಿರಣ,
ನಂಬಿಕೆಯ ದೀಪವಾಗಿ ಬೆಳಗುವ ದೇವರು.
ಪ್ರೀತಿ, ಕ್ಷಮೆ, ಸೇವೆಯ ಪಾಠ ಕಲಿಸಿದ,
ಮಾನವತೆಗೆ ಮಾರ್ಗದರ್ಶಕನಾದನು.

ಡಿನೋಜ ಏನ್

## ಪೆಟ್ರೋಕೆಮಿಕಲ್ ಉತ್ಪನ್ನಗಳಿಗೆ ಕಸ್ಟಮ್ಸ್ ಸುಂಕ ವಿನಾಯಿತಿ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷದ ಹಿನ್ನೆಲೆಯಲ್ಲಿ ಜಾಗತಿಕ ಸರಬರಾಜು ಸರಪಳಿಯಲ್ಲಿ ಉಂಟಾದ ವ್ಯತ್ಯಯಗಳನ್ನು ಗಮನದಲ್ಲಿಟ್ಟುಕೊಂಡು, ಪ್ರಮುಖ ಪೆಟ್ರೋಕೆಮಿಕಲ್ ಉತ್ಪನ್ನಗಳ ಆಮದು ಮೇಲಿನ ಕಸ್ಟಮ್ಸ್ ಸುಂಕವನ್ನು ಕೇಂದ್ರ ಸರ್ಕಾರ ವಿನಾಯಿತಿ ನೀಡಿದೆ.**



ಈ ವಿನಾಯಿತಿ ಜೂನ್ 30ರವರೆಗೆ ಜಾರಿಯಲ್ಲಿದ್ದು, ಪ್ಲಾಸ್ಟಿಕ್, ಪ್ಯಾಕೇಜಿಂಗ್, ವಸ್ತ್ರ, ಔಷಧ, ರಾಸಾಯನಿಕ, ವಾಹನ ಭಾಗಗಳು ಸೇರಿದಂತೆ ವಿವಿಧ ಉತ್ಪಾದನಾ ಕ್ಷೇತ್ರಗಳಿಗೆ ಪ್ರಯೋಜನಕಾರಿ ಯಾಗಲಿದೆ. ಹಣಕಾಸು ಸಚಿವಾಲಯ ಪ್ರಕಟಣೆ ಪ್ರಕಾರ, ದೇಶೀಯ ಕೈಗಾರಿಕೆಗಳಿಗೆ ಅಗತ್ಯವಿರುವ ಪೆಟ್ರೋಕೆಮಿಕಲ್ ಮೂಲ ಪದರಗಳ ಲಭ್ಯತೆ ನಿರಂತರವಾಗಿರಲು, ಕೆಳಮಟ್ಟದ ಕ್ಷೇತ್ರಗಳ ಮೇಲಿನ ವೆಚ್ಚದ ಒತ್ತಡ ಕಡಿಮೆ ಮಾಡಲು ಮತ್ತು ಸರಬರಾಜು ಸ್ಥಿರತೆ ಕಾಪಾಡಲು ಈ ಕ್ರಮ ಕೈಗೊಳ್ಳಲಾಗಿದೆ. ಇದರಿಂದ ಅಂತಿಮ ಉತ್ಪನ್ನಗಳ ಗ್ರಾಹಕರಿಗೂ ಪರಿಹಾರ ಸಿಗಲಿದೆ ಎಂದು ತಿಳಿಸಲಾಗಿದೆ.ವಿನಾಯಿತಿ ನೀಡಲಾದ ಉತ್ಪನ್ನಗಳಲ್ಲಿ ಮೆಥನಾಲ್, ಅನ್ಹೈಡ್ರಸ್ ಅಮೋನಿಯಾ, ಟೋಲ್ಯೂಯಿನ್, ಸ್ಟೈರಿನ್, ಡೈಕ್ಲೋರೋಮಿಥೇನ್ (ಮೆಥಿಲಿನ್ ಕ್ಲೋರೈಡ್), ವಿನೈಲ್ ಕ್ಲೋರೈಡ್ ಮೊನೋಮರ್ ಪಾಲಿ ಬುಟಾಡೈನ್, ಸ್ಟೈರಿನ್ ಬುಟಾಡೈನ್ ಮತ್ತು ಅನ್‌ಸ್ಯಾಚ್ಯುರೇಟೆಡ್ ಪಾಲಿಯೆಸ್ಟರ್ ರೆಸಿನ್ ಸೇರಿವೆ. ಪಶ್ಚಿಮ ಏಷ್ಯಾದ ಯುದ್ಧದ ಪರಿಣಾಮ ಸಾಗರ ಮಾರ್ಗಗಳಲ್ಲಿ ವ್ಯತ್ಯಯ ಉಂಟಾಗಿ ರಾಸಾಯನಿಕ ಗೊಬ್ಬರ, ಕಚ್ಚಾ ತೈಲ ಮತ್ತು ನೈಸರ್ಗಿಕ ಅನಿಲದ ಆಮದು ಕುರಿತು ಆತಂಕ ವ್ಯಕ್ತವಾಗಿದೆ. ಭಾರತವು ಇವುಗಳ ಪ್ರಮುಖ ಆಮದುದಾರ ದೇಶವಾಗಿದೆ.ಅಮೆರಿಕ ಮತ್ತು ಇಸ್ರೇಲ್ ಫೆಬ್ರವರಿ 28ರಂದು ಇರಾನ್ ಮೇಲೆ ದಾಳಿ ನಡೆಸಿದ ನಂತರ ಜಾಗತಿಕ ಕಚ್ಚಾ ತೈಲ ಬೆಲೆಗಳು ಸುಮಾರು 50% ಏರಿಕೆಯಾಗಿದೆ. ಇದಕ್ಕೂ ಮುನ್ನ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಲೀಟರ್‌ಗೆ ರೂ. 10ರಷ್ಟು ಕಡಿತಗೊಳಿಸಿ ಗ್ರಾಹಕರಿಗೆ ಪರಿಹಾರ ನೀಡಿತ್ತು. ಜೊತೆಗೆ ಡೀಸೆಲ್ ಮೇಲೆ ಲೀಟರ್‌ಗೆ ರೂ. 21.50 ಮತ್ತು ಏವಿಯೇಷನ್ ಟರ್ಬೈನ್ ಫ್ಯುಯೆಲ್ (ಎಟಿಎಫ್) ಮೇಲೆ ರೂ. 29.50 ರಷ್ಟು ರಫ್ತು ಸುಂಕ ವಿಧಿಸಲಾಗಿದೆ.ಪ್ರಸ್ತುತ ಪೆಟ್ರೋಲ್ ಮೇಲಿನ ಅಬಕಾರಿ ಸುಂಕ ರೂ. 3 ಮತ್ತು ಡೀಸೆಲ್ ಮೇಲಿನದು ಶೂನ್ಯವಾಗಿದೆ.

## ಜಿಲ್ಲಾಡಳಿತದಿಂದ ಏಪ್ರಿಲ್ 5ರಂದು ಡಾ.ಬಾಬು ಜಗಜೀವನ ರಾಮ್ ಅವರ 119ನೇ ಜನ್ಮ ದಿನಾಚರಣೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರ ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಭಾರತ ಮಾಜಿ ಉಪ ಪ್ರಧಾನಿ, ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರ 119ನೇ ಜನ್ಮ ದಿನಾಚರಣೆಯನ್ನು ಏಪ್ರಿಲ್ 5ರ ಬೆಳಿಗ್ಗೆ 11.30ಗಂಟೆಗೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.**

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.



ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ,

ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ,

ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್,ಕೆ.ಕೆ.ಆರ್.ಡಿ.ಬಿ ಕಾರ್ಯದರ್ಶಿಗಳಾದ ನಳೀನ್ ಅತುಲ್, ಜಿಲ್ಲಾಧಿಕಾ–ರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ–ರಿಗಳಾದ ಅರುಣಾಂಗ್ಶು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಭಾಗಿಯಾಗಲಿದ್ದಾರೆ. ಉಪನ್ಯಾಸಕರಾಗಿ ಮಾನ್ವಿ ಸರ್ಕಾರಿ ಪ್ರಥ–'ಮ ದರ್ಜೆ ಕಾಲೇಜಿನ ಉಪನ್ಯಾಸಕರಾದ ಡಾ.ಬಸವರಾಜ ಕರಡಿಗುಡ್ಡ ಅವರು ಡಾ.ಬಾಬು ಜಗಜೀವನ ರಾಮ್ ಅವರ ಕುರಿತು ಉಪನ್ಯಾಸ ಮಾಡಲಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈಲ್ವೆ ನೇಮಕಾತಿ ಪರೀಕ್ಷೆಗಳನ್ನು ಕನ್ನಡದಲ್ಲಿ ನಡೆಸಲು ಸಂಸದ ಜಿ. ಕುಮಾರ ನಾಯಕ ಮನವಿ

ನೈಜ್ಯ ದೆಸೆ ನ್ಯೂಸ್

**ನವದೆಹಲಿಯಲ್ಲಿ ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಅವರನ್ನು ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಜಿ ಕುಮಾರ್ ನಾಯಕ ಅವರು ಭೇಟಿ ಮಾಡಿ, ಕಲ್ಯಾಣ ಕರ್ನಾಟಕ ಭಾಗದ ಮೂಲಸೌಕರ್ಯ ಅಭಿವೃದ್ಧಿ, ಉದ್ಯೋಗಾವಕಾಶ ವೃದ್ಧಿ ಹಾಗೂ ರೈಲು ಸಂಪರ್ಕ ಸುಧಾರಣೆ ಕುರಿತು ಮಹತ್ವದ ಬೇಡಿಕೆಗಳನ್ನು ಮಂಡಿಸಿದರು.**

ಭೇಟಿ ವೇಳೆ ಸಂಸದರು ಪ್ರಧಾನಮಂತ್ರಿ ಗತಿಶಕ್ತಿ ರಾಷ್ಟ್ರೀಯ ಮಹಾಯೋಜನೆಯಡಿ ರಾಯಚೂರು ನಗರದ ಹೊರವಲಯದಲ್ಲಿ ಆಧ–'ನಿಕ ಮಲ್ಟಿ–ಮೊಡಲ್ ಕಾರ್ಗೋ ಟರ್ಮಿನಲ್ ಸ್ಥಾಪಿಸುವಂತೆ ಮನವಿ ಮಾಡಿದರು. ರಾಯಚೂರು ಜಿಲ್ಲೆ ಭೌಗೋಳಿಕವಾಗಿ ಪ್ರಮುಖ ಸ್ಥಾನದಲ್ಲಿದ್ದು, ಇಲ್ಲಿ ಕಾರ್ಗೋ ಟರ್ಮಿನಲ್ ಸ್ಥಾಪನೆಯಾದಲ್ಲಿ



ಕೃಷಿ ಉತ್ಪನ್ನಗಳು, ಖನಿಜ ಸಂಪತ್ತು ಹಾಗೂ ಕೈಗಾರಿಕಾ ವಸ್ತುಗಳ ಸಾಗಣೆ ಸುಗಮವಾಗಲಿದೆ. ಇದರಿಂದ ಉದ್ಯಮ ಹೂಡಿಕೆ ಹೆಚ್ಚಾಗಿ ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ಅವರು ವಿವರಿಸಿದರು. ಸಂಸದರು ವಿಶೇಷವಾಗಿ ರೈಲ್ವೆ ನೇಮಕಾತಿ ಮಂಡಳಿ ನಡೆಸುವ ಪರೀಕ್ಷೆಗಳನ್ನು ಕನ್ನಡ ಸೇರಿದಂತೆ ಪ್ರಾದೇಶಿಕ ಭಾಷೆಗಳಲ್ಲಿ ನಡೆಸುವ ಅಗತ್ಯವನ್ನು ಒತ್ತಿ ಹೇಳಿದರು.

ಭಾಷಾ ಅಡಚಣೆ ಕಾರಣದಿಂದ ಗ್ರಾಮೀಣ ಹಿನ್ನೆಲೆಯ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಹಿನ್ನಡೆಯಾಗುತ್ತಿರುವುದನ್ನು ಸಚಿವರ ಗಮನಕ್ಕೆ ತಂದ ಅವರು, ಕನ್ನಡದಲ್ಲಿ ಪರೀಕ್ಷೆ ನಡೆಸುವುದರಿಂದ ಕರ್ನಾಟಕದ ಸಾವಿರಾರು ಯುವಕರಿಗೆ ಸಮಾನ ಅವಕಾಶ ದೊರೆಯಲಿದೆ ಎಂದು ಮನವರಿಕೆ ಮಾಡಿದರು. ಪ್ರಯಾಣಿಕರ ಸೌಲಭ್ಯ ಹೆಚ್ಚಿಸುವ ನಿಟ್ಟಿನಲ್ಲಿ ವಿಶಾಖಪಟ್ಟಣಂ?ಮಹೆಬೂಬ್‌ನಗರ ರೈಲನ್ನು ರಾಯಚೂರಿನವರೆಗೆ ವಿಸ್ತರಿಸುವಂತೆ ಹಾಗೂ ರೈಲು ಸಂಖ್ಯೆ 20953/20954 ಮತ್ತು 22689/22690 ರೈಲುಗಳನ್ನು ಅಬು ರೋಡ್ ತನಕ ವಿಸ್ತರಿಸುವಂತೆ ಮನವಿ ಸಲ್ಲಿಸಿದರು. ಈ ವಿಸ್ತರಣೆ ಜಾರಿಯಾದಲ್ಲಿ ಕರ್ನಾಟಕ, ತೆಲಂಗಾಣ ಹಾಗೂ ರಾಜಸ್ಥಾನ ರಾಜ್ಯಗಳ ನಡುವೆ ಸಂಪರ್ಕ ವಿಸ್ತರಿಸಿ ವ್ಯಾಪಾರ, ಶಿಕ್ಷಣ, ಧಾರ್ಮಿಕ ಹಾಗೂ ವೈದ್ಯಕೀಯ ಪ್ರಯಾಣಗಳಿಗೆ ಮಹತ್ವದ ನೆರವು ದೊರೆಯಲಿದೆ ಎಂದು ಹೇಳಿದರು.

ಸಚಿವರೊಂದಿಗೆ ನಡೆದ ಸುಧೀರ್ಘ ಚರ್ಚೆಯಲ್ಲಿ ಪ್ರಾದೇಶಿಕ ಸಮತೋಲನ ಅಭಿವೃದ್ಧಿ, ಉತ್ತರ ಕರ್ನಾಟಕ ಭಾಗದ ಮೂಲಸೌಕರ್ಯ ಬಲವರ್ಧನೆ ಹಾಗೂ ಸಾರ್ವಜನಿಕರ ಪ್ರಯಾಣ ಅನುಕೂಲತೆ ಕುರಿತು ಸಂಸದರು ವಿಶೇಷವಾಗಿ ಒತ್ತಾಯಿಸಿದರು. ಮಂಡಿಸಲಾದ ಬೇಡಿಕೆಗಳನ್ನು ಸಕಾರಾತ್ಮಕವಾಗಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ರೈಲ್ವೆ ಸಚಿವರು ಭರವಸೆ ನೀಡಿರುವುದಾಗಿ ತಿಳಿದುಬಂದಿದೆ. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ ಹಾಗೂ ಯುವಕರ ಭವಿಷ್ಯಕ್ಕಾಗಿ ಕೇಂದ್ರ ಸರ್ಕಾರದ ಮಟ್ಟದಲ್ಲಿ ನಿರಂತರವಾಗಿ ಪ್ರಯತ್ನಿಸುತ್ತಿದ್ದೇನೆ ಎಂದು ಸಂಸದ ಜಿ. ಕುಮಾರ ನಾಯಕ ಅವರು ಈ ಸಂದರ್ಭದಲ್ಲಿ ಹೇಳಿದರು.

## ಮದುವೆ ದಿಬ್ಬಣದಲ್ಲಿ ಮನಸೂರೆಗೊಂಡ ದೇಶಿ ಕ್ರೀಡೆ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ದಿಗಂಬರವಾದೂತ ಶ್ರೀ ಅನ್ನಮಯ್ಯ ತಾತನ ದೇವಸ್ಥಾನದಲ್ಲಿ ಕಗ್ಗೇಲಿ ಬಂದುಗಳ ಮದುವೆ ಸಮಾರಂಭ ಕಾರ್ಯಕ್ರಮದಲ್ಲಿ ವಿನೂತನವಾಗಿ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯನ್ನು ಏರ್ಪಡಿಸಲಾಗಿ–ತ್ತು. ಬೆಳಗಿನ ಪೇಟೆಯ ನವ ವದು ವರರು ವಿಶೇಷವಾಗಿ ಮದುವೆ ಸಮಾರಂಭದಲ್ಲಿ ದೇಶಿ ಕ್ರೀಡೆಯನ್ನು ಏರ್ಪಡಿಸಿ ಅಚ್ಚರಿ ಮೂಡಿಸಿದರು.**




ಪ್ರಥಮ ಬಹುಮಾನ 5000 ರೂ. ಹಾಗೂ ದ್ವಿತೀಯ ಬಹುಮಾನ 3000 ರೂ. ಆಯೋಜಿಸಲಾಗಿತ್ತು. ಇದರಲ್ಲಿ ಪ್ರಥ–'ಮ ಬಹುಮಾನವನ್ನು ಗೋವಿಂದ ಬಿಜನಿಗೇರಿ ಪಡೆದುಕೊಂಡರೆ ದ್ವಿತೀಯ ಬಹುಮಾನವನ್ನು ಶಿವರಾಜ್ ಮಲ್ಲಾಪುರು ಮತ್ತು ಶರೀಪ್ ಕುರ್ಡಿಯವರು ಪಡೆದುಕೊಂಡರು.ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯಲ್ಲಿ ರಾಯಚೂರು ಜಿಲ್ಲೆಯ ಸುತ್ತಮುತ್ತಲಿನ ಗ್ರಾಮದ ಯುವಕರು ಭಾಗವಹಿಸಿ ದೇಶಿ ಕ್ರೀಡೆಯನ್ನು ಯಶಶ್ವಿಗೊಳಿಸಿದರು.

ಈ ಸಂದರ್ಭದಲ್ಲಿ ರಾಮಣ್ಣ ನಾಯಕ ಜಿಲ್ಲಾಧ್ಯಕ್ಷರು ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ರಾಯಚೂರು, ನಾಯ್ಡು ನಾಯಕ, ದೇವರಾಜ ನಾಯಕ ತಾಲೂಕಾಧ್ಯಕ್ಷರು ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಮಾನ್ವಿ, ಕೊಂಡಯ್ಯ ನಾಯಕ ತಾ. ಪ್ರಧಾನ ಕಾರ್ಯದರ್ಶಿ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಮಾನ್ವಿ, ರಂಗಪ್ಪ ನಾಯಕ ಉಪಾಧ್ಯಕ್ಷರು, ಹಂಪಯ್ಯ ನಾಯಕ, ತಾಯಣ್ಣ, ರಮೇಶ, ವಿಶ್ವನಾಥ್, ದೇವರಾಜ, ರಾಮಣ್ಣ ಚಿರತಪಲ್ಲಿ ಹಾಗೂ ಯುವಕರು ಉಪಸ್ಥಿತರಿದ್ದರು.

## ಹನುಮ ಜಯಂತಿಯ ಪ್ರಯುಕ್ತ ಬಳಗಾನೂರಿನಲ್ಲಿ ಮುಖ್ಯಪ್ರಾಣ ದೇವರಿಗೆ ಮಹಾಅಭಿಷೇಕ ಹಾಗೂ ರಥೋತ್ಸವ ಮತ್ತು ಅನ್ನ ಸಂತರ್ಪಣೆ

ನೈಜ್ಯ ದೆಸೆ ನ್ಯೂಸ್

**ಬಳಗಾನೂರು: ಹನುಮ ಜಯಂತಿಯ ಪ್ರಯುಕ್ತ ಮಸ್ಕಿ ತಾಲೂಕಿನ ಬಳಗಾನೂರು ಪಟ್ಟಣದ ಮಾರುತಿ ದೇವಸ್ಥಾನದಲ್ಲಿ ಭಕ್ತಿಭಾವದಿಂದ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ವಿಜೃಂಭಣೆಯಿಂದ ಜರುಗಿದವು. ಈ ಪವಿತ್ರ ಸಂದರ್ಭದಲ್ಲಿ ಕಣ್ವ ಮಠಾಧೀಶರಾದ ಪರಮಪೂಜ್ಯ ಶ್ರೀ ಶ್ರೀ ಶ್ರೀ 1008 ವಿದ್ಯಾ ಕಣ್ವ ವಿರಾಜತೀರ್ಥ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಸಂಸ್ಥಾನ ಪೂಜೆ ನೆರವೇ–ರಿಸಲಾಯಿತು.**







ನಂತರ ಮುಖ್ಯಪ್ರಾಣ ದೇವರಾದ ಶ್ರೀ ಹನುಮಂತನಿಗೆ ಮಹಾಅಭಿಷೇಕ ನೆರವೇರಿಸಿ ಭಕ್ತರು ಭಕ್ತಿ ಸಮರ್ಪಿಸಿದರು.ರಥೋತ್ಸವವು ಭಕ್ತರ ಘೋಷಣೆಗಳ ನಡುವೆ ವೈಭವದಿಂದ ನಡೆಯಿತು. ನಂತರ ಅನ್ನ ಸಂತರ್ಪಣೆ ಕಾರ್ಯಕ್ರಮವು ಭಕ್ತರಿಗೆ ಪ್ರಸಾದವಾಗಿ ವಿತ–ರಿಸಲಾಯಿತು.ಶ್ರೀ ಹನುಮಂತನು ಭಕ್ತಿ, ಶಕ್ತಿ, ಧೈರ್ಯ ಮತ್ತು ನಿಷ್ಠೆಯ ಪ್ರತೀಕ. ಶ್ರೀರಾಮನಿಗೆ ಅಚಲ ಭಕ್ತನಾಗಿರುವ ಹನುಮನು ತನ್ನ ಸೇವಾಭಾವದಿಂದ ಮಾನವಕುಲಕ್ಕೆ ಆದರ್ಶವಾಗಿದ್ದಾನೆ.

ಅವನ ಜೀವನವು ನಮ್ಮೆಲ್ಲರಿಗೂ ಧೈರ್ಯ, ಸತ್ಯನಿಷ್ಠೆ ಮತ್ತು ಸೇವಾ ಮನೋಭಾವವನ್ನು ಬೋಧಿಸುತ್ತದೆ. ಹನುಮ ಜಯಂತಿ ನಮಗೆ ಭಕ್ತಿ ಮತ್ತು ಸೇವೆಯ ಮಹತ್ವವನ್ನು ನೆನಪಿಸುವ ಮಹತ್ವದ ಹಬ್ಬವಾಗಿದೆ.ಈ ಸಂದರ್ಭದಲ್ಲಿ ಹನುಮೇಶ ಕುಲಕರ್ಣಿ, ರಂಗನಾಥ ಪೂಜಾರಿ, ವೆಂಕಟೇಶ್ ಪೂಜಾರಿ, ವಾಜೇಂದ್ರ ರಾವ ಪಟವಾರಿ, ಮಲ್ಹರಾವ ಕ್ಯಾತ್ನಾಟ್ಟಿ, ಹನುಮೇಶ್ ಜೋಶಿ, ರಾಘವೇಂದ್ರ ರಾವ್ ಕುಲಕರ್ಣಿ, ರಮೇಶ ಕುಲಕರ್ಣಿ, ಶ್ರೀನಿವಾಸ ಮುಜಂದರ್, ಮಧುಸೂದನ್ ಪಟವಾರಿ, ಸಂಜೀವ್, ಪವನ, ಪ್ರಜ್ವಲ್ ಹಾಗೂ ಸಮಸ್ತ ವಿಪ್ರ ಬಾಂದವರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಮೋದಿ ನಾಯಕತ್ವದಲ್ಲಿ ರಾಮ ಮಂದಿರ ನಿರ್ಮಾಣವಾಯಿತು :ಯತ್ನಾಳ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ದೇಶದ ಪ್ರಧಾನಿಯಾಗಿ ನರೇಂದ್ರ ಮೋದಿ ಅಧಿಕಾರ ಸ್ವೀಕರಿಸಿದ ನಂತರ ಜಮ್ಮು–ಕಾಶ್ಮೀರಕ್ಕೆ ಸಂಬಂಧಿಸಿದ ಆರ್ಟಿಕಲ್ 370 ವಿಧಿಯನ್ನು ರದ್ದುಪಡಿಸುವಂತಹ ಧೈರ್ಯಶಾಲಿ ನಿರ್ಧಾರ ಕೈಗೊಳ್ಳಲಾಯಿತು. ಅಲ್ಲದೇ ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣವೂ ಸಾಧ್ಯವಾಯಿತು ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ಹೇಳಿದರು.**

ಅವರಿಂದು ಪಟ್ಟಣದ ದೊಡ್ಡ ಹನುಮಂತ ದೇವಸ್ಥಾನದ ಮುಂಭಾಗ ಕ್ಷತ್ರೀಯ ಸಮಾಜ ಆಯೋಜಿಸಿದ್ದ ಛತ್ರಪತಿ ಶಿವಾಜಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಮಾತನಾಡಿದ ಅವರು, ದೇಶದ ಭದ್ರತಾ ವ್ಯವಸ್ಥೆ ಅತ್ಯಂತ ಬಲಿಷ್ಠವಾಗಿದ್ದು, ಇಂಟಲಿಜೆನ್ಸ್ ಹಾಗೂ ಸೈನ್ಯವು ಶಕ್ತಿಶಾಲಿಯಾಗಿದೆ. ಆದರೆ ಅವುಗಳನ್ನು ಸಮರ್ಥವಾಗಿ ಮುನ್ನಡೆಸಲು ಒಬ್ಬ ದೃಢ ನಾಯಕ ಅಗತ್ಯವಿತ್ತು. ಆ ನಾಯಕತ್ವವನ್ನು ನರೇಂದ್ರ ಮೋದಿ ಒದಗಿಸಿದ್ದಾರೆ ಎಂದು ಹೇಳಿದರು. ಕೆಲ ಸಮುದಾಯಗಳ ಬಗ್ಗೆ ವಿವಾದಾತ್ಮಕ ಹೇಳಿಕೆಗಳನ್ನು ನೀಡುತ್ತಾ, ದೇಶಭಕ್ತಿ ಮತ್ತು ಧರ್ಮದ ವಿಷಯಗಳನ್ನು ಉಲ್ಲೇಖಿಸಿದರು.



ಸಾರ್ವಜನಿಕ ಉತ್ಸವಗಳ ಸಂದರ್ಭದಲ್ಲಿ ಅಶಾಂತಿ ಸೃಷ್ಟಿಸುವವರ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ರಾಜಕೀಯವಾಗಿ ರಾಜ್ಯ ಸರ್ಕಾರದ ವಿರುದ್ಧ ತೀವ್ರ ಟೀಕೆ ನಡೆಸಿದ ಅವರು, ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಭ್ರಷ್ಟಾಚಾರದಲ್ಲಿ ತೊಡಗಿಕೊಂಡಿದೆ ಎಂದು ಆರೋಪಿಸಿದರು. ಗುತ್ತಿಗೆದಾರರಿಗೆ ಹಣ ಪಾವತಿ ಮಾಡುವಲ್ಲಿ ಸರ್ಕಾರ ವಿಫಲವಾಗಿದೆ. ಗ್ಯಾರಂಟಿ ಯೋಜನೆಗಳತ್ತ ಹೆಚ್ಚು ಗಮನ ಹರಿಸಿ. ಅಭಿವೃದ್ಧಿ ಕಾರ್ಯಗಳನ್ನು ಕಡೆಗಣಿಸಲಾಗಿದೆ, ಬಜೆಟ್‌ನಲ್ಲಿ ಮುಸ್ಲಿಂಮರಿಗೆ ಹೆಚ್ಚಿನ ಅನುದಾನ ಮೀಸಲಿಡುವ ಮೂಲಕ ರಾಜ್ಯದಲ್ಲಿ ಮುಸ್ಲಿಂರನ್ನು ಓಲೈಸುವ , ದಲಿತರು ಹಾಗೂ ಹಿಂದುಳಿದ ವರ್ಗಗಳನ್ನು ನಿರ್ಲಕ್ಷಿಸುವ ಸರಕಾರ ಇದೆ. ಎಸ್‌ಇಪಿ ಮತ್ತು ಟಿಎಸ್‌ಪಿ ಯೋಜನೆಗಳ ಸಾವಿರಾರು ಕೋಟಿ ರೂ. ಹಣವನ್ನು ಬೇರೆಡೆಗೆ ವರ್ಗಾಯಿಸಲಾಗಿದೆ ಎಂದು ಆರೋಪಿಸಿದ ಅವರು, ಒಳಮೀಸಲಾತಿ ವಿಚಾರದಲ್ಲಿ ದಲಿತ ಸಮುದಾಯದ ಒಳಪಂಗಡಗಳಲ್ಲಿ ಅಸಮಾಧಾನವಿದೆ,

ನಿರುದ್ಯೋಗ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಸಮರ್ಪಕ ಯೋಜನೆಗಳನ್ನು ಇದೇ ವೇಳೆ ವಾಲ್ಮೀಕಿ ಮತ್ತು ಬೋವಿ ನಿಗಮಗಳಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿಲ್ಲ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಯತೀಂದ್ರ ಸಿದ್ದರಾಮಯ್ಯ ಹಾಗೂ ಸಚಿವ ಬೈರತಿ ಬಸವರಾಜ ವಿರುದ್ಧ ಭ್ರಷ್ಟಾಚಾರದ ಆರೋಪಗಳನ್ನು ಮಾಡಿದ್ದಾರೆ. 2.82 ಲಕ್ಷ ಹುದ್ದೆಗಳು ರಾಜ್ಯದಲ್ಲಿ ಖಾಲಿ ಇವೆ. ಈ ಹುದ್ದೆಗಳ ಭರ್ತಿಗೆ ಸರ್ಕಾರ ಮುಂದಾಗುತ್ತಿಲ್ಲ. ಉದ್ಯೋಗ ಆಕಾಂಕ್ಷಿಗಳು ಪ್ರತಿಭಟನೆ ಮಾಡಿದರೆ ಪೊಲೀಸರಿಂದ ಪ್ರತಿಭಟನೆಯನ್ನು ಹತ್ತಿಕ್ಕುವ ಕೆಲಸ ಸರ್ಕಾರ ಮಾಡುತ್ತಿದೆ. ಶಾಸಕರು ಸರ್ಕಾರಿ ನೌಕರರ ವರ್ಗಾವಣೆಯ ವ್ಯಾಪಾರವನ್ನು ರಾಜ್ಯದಲ್ಲಿ ಮಾಡುತ್ತಿದ್ದಾರೆಂದು ಟೀಕಿಸಿದರು. ಸಿದ್ದರಾಮಯ್ಯ ಅವರ ನಾಯಕತ್ವದಲ್ಲಿ ಬದಲಾವಣೆ ಸಾಧ್ಯತೆ ಇದೆ ಎಂಬ ಸುಳಿವು ವಿಧಾನಸಭೆ ಅಧಿವೇಶನದಲ್ಲೇ ಗೋಚರಿಸಿದೆ.

ಉಪಚುನಾವಣೆಯ ನಂತರ ಮುಖ್ಯಮಂತ್ರಿ ಬದಲಾವಣೆ ಆಗಬಹುದು ಎಂಬ ಮಾತುಗಳು ಕೇಳಿಬರುತ್ತಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬದಲಿಸಿದರೆ ಪ್ರಾಮಾಣಿಕ ನಾಯಕತ್ವ ಬರುವುದಿಲ್ಲ, ಬದಲಿಗೆ ರಾಜ್ಯದ ಹಡಗು ಮುಳುಗಿಸುವವರ ಕೈಗೆ ಅಧಿಕಾರ ಹೋಗಬಹುದು, ಬಾಗಲಕೋಟೆಯಲ್ಲಿ ವೀರಣ್ಣ ಚರಂತಿಮಠ ಅವರ ಪರವಾಗಿ ಪ್ರಚಾರಕ್ಕೆ ತೆರಳುವುದಾಗಿ ತಿಳಿಸಿದರು. ಆದರೆ ಬಿ.ವೈ. ವಿಜಯೇಂದ್ರ ಅವರ ಪರವಾಗಿ ಪ್ರಚಾರ ಮಾಡುವುದಿಲ್ಲವೆಂದು ಸ್ಪಷ್ಟಪಡಿಸಿದರು. ಹಿಂದೂಗಳು ಕರೆಯಿಸಿದರೆ ನಾನು ಪ್ರಚಾರಕ್ಕೆ ಹೋಗುತ್ತೇನೆ, ಬಿಜೆಪಿಗೆ ಮುಸ್ಲಿಂ ಸಮುದಾಯದ ಮತಗಳು ಬಂದರೆ ಸ್ವಾಗತಿಸುವುದಾಗಿ ಹೇಳಿದ ಯತ್ನಾಳ್, ಸಾಮಾನ್ಯವಾಗಿ ಬಿಜೆಪಿಗೆ ನೀಡುವುದಿಲ್ಲವೆಂದರು.

ಆದಾಗ, ವಿಜಯಪುರ ಕ್ಷೇತ್ರದಲ್ಲಿ ಮುಸ್ಲಿಂ ಬಹುಳ್ಯ ಇದ್ದರೂ ತಾವು ಗೆಲುವು ಸಾಧಿಸುವ ವಿಶ್ವಾಸ ವ್ಯಕ್ತಪಡಿಸಿದರು. ಉತ್ತರ ಪ್ರದೇಶದಲ್ಲಿ ಯೋಗಿ ಆಧಿತ್ಯನಾಥ ಸರ್ಕಾರದ ನೇತೃತ್ವದ ಮಾದರಿಯಲ್ಲಿ ಕರ್ನಾಟಕದಲ್ಲೂ ಸರ್ಕಾರ ಬರಬೇಕು ಎಂಬ ಅಭಿಪ್ರಾಯವನ್ನು ಅವರು ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಅಭಿನವಗಜದಂಡ ಶಿವಯೋಗಿ ಶಿವಾಚಾರ್ಯ ದೇವರಭೂಪೂರು ಇವರು ಕಾರ್ಯಕ್ರಮದ ಸಾನಿಧ್ಯವಹಿಸಿದ್ದರು. ಶಾಸಕ ಮಾನಪ್ಪ ಡಿ ವಜ್ಜಲ್, ಮುಖಂಡರಾದ ಗಿರಿಮಲ್ಲನಗೌಡ ಪಾಟೀಲ್ ಕರಡಕಲ್, ಶಂಕರಗೌಡ ಅಮರಾವತಿ, ಸಮಾಜದ ಅಧ್ಯಕ್ಷ ಸತ್ಯನಾರಾಯಣ ಸಿಂಗ್, ರವಿಕುಮಾರ, ಮೋಹನಬಾಬು, ಚಂದಪ್ಪ ಕಟ್ಟಿಮನಿ, ದುರ್ಗಾಸಿಂಗ್, ಗೌತಮ್ ಕುಮಾರ ಸೇರಿದಂತೆ ಸಮಾಜದ ಮುಖಂಡರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದರು.

# ನೇಮಕಾತಿ ಪ್ರಕಟಣೆ

IIMB ನೇಮಕಾತಿ 2026–ವಿವಿಧ ಶೈಕ್ಷಣಿಕ ಸಹಾಯಕ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಏಪ್ರಿಲ್ 1, 2026 ಶಶಿ ಅವರಿಂದ IIMBನೇಮಕಾತಿ 2026: ವಿವಿಧ ಶೈಕ್ಷಣಿಕ ಸಹಾಯಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಬೆಂಗಳೂರು ಋಋಬಃ ಅಧಿಕೃತ ಅಧಿಸೂಚನೆ ಏಪ್ರಿಲ್ 2026 ರ ಮೂಲಕ ಶೈಕ್ಷಣಿಕ ಸಹಾಯಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂರಿನಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು–ಕರ್ನಾಟಕ ಸರ್ಕಾರ ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 25–ಏಪ್ರಿಲ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 01–04–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25–ಏಪ್ರಿಲ್–2026 ಅಧಿಕೃತ ವೆಬ್‌ಸೈಟ್: iimb.ac.in

# ನಕಲಿ ಕ್ಲಿನಿಕ್‌ಗಳ ಮೇಲೆ ದಾಳಿ: 18 ಎಫ್‌ಐಆರ್ ದಾಖಲು, 13 ಕ್ಲಿನಿಕ್ ಸೀಜ್

ನೈಜ್ಯ ದೇಸೆ ನ್ಯೂಸ್

**ರಾಯಚೂರು: ಜಿಲ್ಲೆಯಲ್ಲಿ ವೈದ್ಯರೆಂದು ಸುಳ್ಳು ಹೇಳಿ ಅಮಾಯಕ ಜನರಿಗೆ ಮೋಸ ಮಾಡಿ ಗೊತ್ತಿಲ್ಲದ ಔಷಧಿಗಳ ಮೂಲಕ ಚಿಕಿತ್ಸೆ ನೀಡುವುದನ್ನೆ ವೃತ್ತಿಯಾಗಿ ಮಾಡಿಕೊಂಡಿರುವ ನಕಲಿ ವೈದ್ಯರ ಕ್ಲಿನಿಕ್‌ಗಳ ಮೇಲೆ ಜಿಲ್ಲೆಯಾದ್ಯಂತ 31 ನಕಲಿ ವೈದ್ಯರ ವಿರುದ್ಧ ದಾಳಿ ಮಾಡಿ 18 ನಕಲಿ ವೈದ್ಯರ ವಿರುದ್ಧ ಎಫ್‌ಐಆರ್ ದಾಖಲು ಹಾಗೂ 13 ಕ್ಲಿನಿಕ್ ಸೀಜ್ ಮಾಡಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಸುರೇಂದ್ರಬಾಬು ಅವರು ತಿಳಿಸಿದ್ದಾರೆ.**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರಕಾರದ ಪ್ರಧಾನ ಕಾರ್ಯದರ್ಶಿಗಳ ಅವರ ಸೂಚನೆ ಮೇರೆಗೆ ಮತ್ತು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಇವರ ಮಾರ್ಗದರ್ಶನದಂತೆ ಜಿಲ್ಲೆಯಲ್ಲಿರುವ ನಕಲಿ ವೈದ್ಯರುಗಳ ವಿರುದ್ಧ ಕ್ರಮ ಕೈಗೊಳ್ಳಲು ಕಂದಾಯ ಇಲಾಖೆ,




ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ, ಆಯುಷ್ಯ ಇಲಾಖೆ ಸೇ–ರಿದಂತೆ ಜಿಲ್ಲಾ ಮತ್ತು ತಾಲೂಕ ಮಟ್ಟದ ಅಧಿಕಾರಿಗಳನ್ನು ಒಳಗೊಂಡ ಸಮಿತಿಗಳನ್ನು ರಚನೆ ಮಾಡಿ ದಿನಾಂಕ: 01.04.2026ರಂದು ಏಕಾಕಾಲಕ್ಕೆ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳ ತಂಡವು ಸಕ್ರಿಯವಾಗಿ ಭಾಗವಹಿಸಿ ಈ ವಿಶೇಷ ಕಾರ್ಯಚರಣೆಯಲ್ಲಿ ವಿವಿಧ ಪ್ರದೇಶಗಳಲ್ಲಿ ಒಂದೇ ಸಮಯದಲ್ಲಿ ಅನಧಿಕೃತವಾಗಿ ಕ್ಲಿನಿಕ್ ನಡೆಸುತ್ತಿದ್ದ ನಕಲಿ ವೈದ್ಯರು ಹಾಗೂ ಕೆ.ಪಿ.ಎಂ.ಇ ಕಾಯ್ದೆ ಅಡಿಯಲ್ಲಿ ನೋಂದಣಿಯಾಗದ ಖಾಸಗಿ ಕ್ಲೀನಿಕ್‌ಗಳ ಮೇಲೆ ದಾಳಿ ನಡೆಸಲಾಯಿತು.

ಈ ದಾಳಿಯಲ್ಲಿ ವೈದ್ಯಕೀಯ ಅರ್ಹತೆ ಇಲ್ಲದೆ ಕ್ಲಿನಿಕ್ ನಡೆಸುತ್ತಿದ್ದ ಹಲವಾರು ನಕಲಿ ವೈದ್ಯರುಗಳನ್ನು ಗುರುತಿಸಿ, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆ. ದಾಳಿ ವೇಳೆ ನಕಲಿ ವೈದ್ಯರು ಬಳಸುತ್ತಿದ್ದ ಔಷಧಿಗಳು, ಉಪಕರಣಗಳು ಮತ್ತು ದಾಖಲೆಗಳನ್ನು ವಶಪಡಿಸಿಕೊಂಡು ಸಿಲ್ ಮಾಡಲಾಗಿದೆ. ಮುಂದುವರೆದು ಜಿಲ್ಲೆಯಲ್ಲಿ ನಕಲಿ ವೈದ್ಯರ ವಿರುದ್ಧ ಕಾರ್ಯಚರಣೆ ಮುಂದುವರೆಯಲಿದ್ದು, ಜಿಲ್ಲೆಯಲ್ಲಿ ನಕಲಿ ವೈದ್ಯರು ಇಲ್ಲದಂತೆ ಕ್ರಮ ವಹಿಸಲಾಗುವುದು ಎಂದರು. ದಾಳಿಯ ನಂತರ ದಾಖಲಾತಿಗಳ ಪರಿಶೀಲನೆ ಕೈಗೊಂಡು ನಕಲಿ ವೈದ್ಯರ ವಿರುದ್ಧ ಒಟ್ಟು 18 ನಕಲಿ ವೈದ್ಯರ ವಿರುದ್ಧ ಎಫ್‌ಐಆರ್ ದಾಖಲು ಮತ್ತು 13 ಕ್ಲೀನಿಕ್ ಗಳನ್ನು ಸೀಜ್ ಮಾಡಿ ನೋಟಿಸ್ ನೀಡಲಾಗಿದೆ.

ಸಾರ್ವಜನಿಕರು ಈ ದಿಶೆಯಲ್ಲಿ ತಮ್ಮ ಗ್ರಾಮದಲ್ಲಿ ವೈದ್ಯ ವೃತ್ತಿ ಮಾಡಲು






ಯಾರಾದರೂ ಆಗಮಿಸಿದರೆ ದಯವಿಟ್ಟು ಅವರ ವಿದ್ಯಾರ್ಹತೆಯ ಮಾಹಿತಿ ಪಡೆಯಬೇಕು. ಒಂದು ವೇಳೆ ನಕಲಿ ವೈದ್ಯರಾದರೆ ಹತ್ತಿರದ ಆರೋಗ್ಯ ಕೇಂದ್ರಗಳಿಗೆ ಮಾಹಿತಿ ನೀಡಬೇಕು. ಕಟ್ಟಡಗಳನ್ನು, ಮಳಿಗೆ, ಮನೆಗಳನ್ನು ಬಾಡಿಗೆ ನೀಡುವ ಮಾಲಿಕರು ಸಹ ಎಚ್ಚರಿಕೆ ವಹಿಸಬೇಕೆಂದು ಜಿಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಭಿವೃದ್ಧಿ ನಿಲ್ಲಿಸಿ ಸಾಲ ಮಾಡಿರುವ ಶ್ರೇಯಸ್ಸು ಸಿದ್ದರಾಮಯ್ಯಗೆ ಸಲ್ಲುತ್ತದೆ ;ಬೊಮ್ಮಾಯಿ

ನೈಜ್ಯ ದೇಸೆ ನ್ಯೂಸ್

**ಬೆಂಗಳೂರು: ಸಂಪೂರ್ಣ ಅಭಿವೃದ್ಧಿ ನಿಲ್ಲಿಸಿ ಸಾಲ ಮಾಡಿರುವ ಶ್ರೇಯಸ್ಸು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಲ್ಲುತ್ತದೆ. ತಮ್ಮ ತಪ್ಪು ಮುಚ್ಚಿಕೊಳ್ಳಲು ಸಂಸದರ ಮೇಲೆ ಬೊಟ್ಟು ಮಾಡುವುದು ಎಷ್ಟು ಸರಿ ಎಂದು ಸಂಸದ ಬಸವರಾಜ ಬೊಮಾಯಿ ಪ್ರಶ್ನೆ ಮಾಡಿದ್ದಾರೆ. ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಸಿದ್ದರಾಮಯ್ಯ ತಮ್ಮ ವೈಫಲ್ಯ ಮುಚ್ಚಿಕೊಳ್ಳಲು ಮತ್ತು ರಾಜಕಿಯ ಲಾಭಕ್ಕಾಗಿ ತಂದಿರುವ ಗ್ಯಾರೆಂಟಿ ಅನುಷ್ಠಾನ ಮಾಡಲು ಮೊದಲನೆ ಬಜೆಟ್ ನಿಂದ ಸ್ಟಾಂಪ್ ಡ್ಯೂಟಿ, ಅಬಕಾರಿ ತೆರಿಗೆ, ಮೋಟರ್ ವೆಹಿಕಲ್ ತೆರಿಗೆ ಹೆಚ್ಚಳ ಮಾಡಿ ತೆರಿಗೆ ಭಯೋತ್ಪಾದನೆ ಮಾಡಿರುವ ಕೀರ್ತಿ, ಸಪೂರ್ಣ ಅಭಿವೃದ್ಧಿ ನಿಲ್ಲಿಸಿ ಸಾಲ ಮಾಡಿರುವ ಶ್ರೇಯಸ್ಸು ಸಿದ್ದರಾಮಯ್ಯಗೆ ಸಲ್ಲುತ್ತದೆ. ತಮ ಮೂಲಭೂತ ತಪ್ಪು ಮುಚ್ಚಿಕೊಳ್ಳಲು ಸಂಸದರ ಮೇಲೆ ಬೊಟ್ಟು ಮಾಡುವುದು ಸರಿಯೇ ಎಂದು ಪ್ರಶ್ನಿಸಿದ್ದಾರೆ.**



14ನೇ ಹಣಕಾಸಿನ ಷರತ್ತುಗಳು ನಿರ್ಧಾರ ಮಾಡುವಾಗ, ನಿಮದೇ ಸರ್ಕಾರ ಇತ್ತು. ಮತ್ತದನ್ನು ಅಂತಿಮಗೊಳಿಸುವಾಗ ನಿಮ ನೇತೃತ್ವದ ಸಮಿಶ್ರ ಸರ್ಕಾರ ಇತ್ತು. ಆಗ ಅದರಲ್ಲಿ ಕಾಂಗ್ರೆಸ್ಸಿನ ಐವರು ಸಚಿವರಿದ್ದರು. ಆಗ ಸುಮನಿದ್ದು, ಈಗ ಅನ್ಯಾಯ ಆಗಿದೆ ಅನ್ನುವುದು ಬೂಟಾಟಿಕೆ ಅಲ್ಲವೆ ಎಂದು ಪ್ರಶ್ನೆ ಮಾಡಿದ್ದಾರೆ. ಜಿಎಸ್‌ಟಿಯನ್ನು ಮೊದಲು ತಂದಿದ್ದು ಯುಪಿಎ ಸರ್ಕಾರ ಎಲ್ಲಾ ಕಾನೂನು ಅವರ ಕಾಲದಲ್ಲಿ ಜಾರಿಗೆ ತಂದು ಜಿಎಸ್ ಟಿ ಅವತಾರಕ್ಕೆ ಕಾರಣಿಭೂತರೇ ಕಾಂಗ್ರೆಸ್‌ನ ಮಹಾನಾಯಕರು.ಜಿಎಸ್‌ಟಿಯ ಎಲ್ಲ ವಿಚಾರಗಳು ಜಿಎಸ್‌ಟಿ ಕೌನ್ಸಿಲ್‌ನಲ್ಲಿ ನಿರ್ಧಾರವಾಗುತ್ತವೆ. ಜಿಎಸ್‌ಟಿ ಕೌನ್ಸಿಲ್‌ನಲ್ಲಿ ಶಾಶ್ವತ ಸದಸ್ಯರಾಗಿ ರಾಜ್ಯ ಸರ್ಕಾರ ಇರುತ್ತದೆ. ಮುಖ್ಯಮಂತ್ರಿಗಳು ಒಂದು ಬಾರಿಯೂ ಜಿಎಸ್ ಟಿ ಕೌನ್ಸಿಲ್ ಸಭೆಗೆ ಹೋಗಿಲ್ಲ. ಅಲ್ಲಿ ಕಳಿಸಿರುವ ನಮ ರಾಜ್ಯದ ಪ್ರತಿನಿಧಿಗಳು ರಾಜ್ಯದ ಹಿತಕಾಪಾಡಲು ಏನು ಕ್ರಮ ತೆಗೆದುಕೊಂಡಿದ್ದಾರೆ? ಅಲ್ಲಿ ಏನೂ ಮಾತನಾಡದೇ ಹೊರಗಡೆ ರಾಜಕಾರಣಕ್ಕಾಗಿ ಈ ಮಾತುಗಳನ್ನಾಡುವಂಥದ್ದು ಸರಿಯಲ್ಲ ಎಂದು ಆಕ್ಷೇಪಿಸಿದರು. ಈ ಕಾನೂನಿನ ಮೂಲ ಪುರುಷರಾದ ಕಾಂಗ್ರೆಸ್ಸಿಗರು. ಕರ್ನಾಟಕಕ್ಕೆ ಅನ್ಯಾಯವಾಗಿರುವುದಲ್ಲಿ ಅವರ ದೊಡ್ಡ ಪಾತ್ರ ಯಾರೂ ಮರೆಯುವುದಿಲ್ಲ. ಅದೇ ರೀತಿ ಕರ್ನಾಟಕ ಅತಿ ಹೆಚ್ಚು ತೆ–ರಿಗೆ ಕೊಡುವ ರಾಜ್ಯ ಮೊದಲಿನಿಂದಲೂ ಇದೆ. ಸೆಸ್ ಸಂವಿಧಾನ ಬದ್ದವಾಗಿ ಯಾವ ವಿಚಾರಕ್ಕಾಗಿ ಸಂಗ್ರಹಿಸುತ್ತಾರೆ ಅದಕ್ಕೆ ಬಳಸಲು ಸಂವಿಧಾನದಲ್ಲಿ ತಂದವರೇ ಕಾಂಗ್ರೆಸ್‌ನವರು. 60ರ ದಶಕದಲ್ಲಿ ತಂದಿರುವ ಈ ಸೆಸ್ ಈಗ ಅನ್ಯಾಯವಾಗುತ್ತಿದೆ ಎಂದು ಬೊಬ್ಬೆ ಹಾಕುವುದು ಎಷ್ಟರ ಮಟ್ಟಿಗೆ ಸರಿ? ಎಂದು ಪ್ರಶ್ನಿಸಿದ್ದಾರೆ. ಆರ್ಥಿಕ ನಿರ್ವಹಣೆಯಲ್ಲಿ ವಿಫಲ: ಸಿಎಂ ಆರ್ಥಿಕ ನಿರ್ವಹಣೆಯಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ . ನಿನ್ನೆ ಬಂದಿರುವ ಸಿಎಜಿ ರಿಪೋರ್ಟ್‌ನಲ್ಲಿ ಸುಮಾರು 25 ಸಾವಿರ ಕೋಟಿ ರೂ. ಬಾಕಿ ಇಟ್ಟುಕೊಂಡಿದ್ದಾರೆ. ಅದಕ್ಕೇನು ಹೇಳುತ್ತಾರೆ ಸಿದ್ದರಾಮಯ್ಯ. 25 ಸಾವಿರ ಕೊಟಿ ಶ್ರೀಮಂತರ ತೆರಿಗೆಯನ್ನು ಬಾಕಿ ವಸೂಲಿ ಮಾಡಲು ಇವರಿಗೆ ಧೈರ್ಯ ಇಲ್ಲವೇ ಅಥವಾ ಮನಸಿಲ್ಲವೇ? ಹೀಗೆ ತಮ ವೈಫಲ್ಯ ಮುಚ್ಚಿಕೊಳ್ಳಲು ಮತ್ತು ರಾಜಕಿಯ ಲಾಭಕ್ಕಾಗಿ ತಂದಿರುವ ಗ್ಯಾರೆಂಟಿ ಅನುಷ್ಠಾನ ಮಾಡಲು ಮೊದಲನೆ ಬಜೆಟ್‌ನಿಂದ ಲ್ಯಾಂಡ್ ಸ್ಟಾಂಪ್ ಡ್ಯೂಟಿ ಹೆಚ್ಚಳ, ಅಬಕಾರಿ ತೆರಿಗೆ, ಮೋಟಾರ್ ವೆಹಿಕಲ್ ಡ್ಯೂಟಿ ಹೆಚ್ಚಳ ಮಾಡಿ ತೆರಿಗೆ ಭಯೋತ್ಪಾದನೆ ಮಾಡಿರುವ ಸಿದ್ದರಾಮಯ್ಯ ಅವರಿಗೆ ಹೋಗುತ್ತದೆ.

# ಜಿಲ್ಲಾಡಳಿತದಿಂದ ಮಕ್ಕಳಿಗಾಗಿ ಬೇಸಿಗೆ ತರಬೇತಿ ಶಿಬಿರ ಆಯೋಜನೆ



ನೈಜ್ಯ ದೇಸೆ ನ್ಯೂಸ್

**ರಾಯಚೂರು: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಯಚೂರು ಇವರುಗಳ ಸಂಯುಕ್ತಾಶ್ರಯದಲ್ಲಿ ಬೇಸಿಗೆ ತರಬೇತಿ ಶಿಬಿರ–2026ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಮಕ್ಕಳ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ. ಶಾಲೆಗಳು 02 ತಿಂಗಳು ರಜೆ ಹಿನ್ನಲೆಯಲ್ಲಿ ಮಕ್ಕಳಿಗೆ ಹೊಸ ಹವ್ಯಾಸ ಅಥವಾ ಕ್ರೀಡೆಯಲ್ಲಿ ಅವರು ಭಾಗವಹಿಸುವಂತೆ ಮಾಡಲು ಸೂಕ್ತ ಸಮಯ ಇದಾಗಿದೆ.**


02 ತಿಂಗಳ ರಜೆಯಲ್ಲಿ ಮೊಬೈಲ್, ಮೋಜು–ಮಸ್ತಿ ಎನ್ನುವ ಬದಲು ಜೀವನ ಕೌಶಲ್ಯವಾದಂತಹ ಈಜು ಅಥವಾ ಮಕ್ಕಳಿಗೆ ದುಶ್ಚಟ/ಮೊಬೈಲ್‌ಗಳಿಂದ ಮಕ್ಕಳನ್ನು ಶಾರೀ–ರಿಕ ಹಾಗೂ ಮಾನಸಿಕ ಆರೋಗ್ಯ ಹೆಚ್ಚಿಸಲು ಕ್ರೀಡೆಗಳಲ್ಲಿ ಅವರನ್ನು ತೊಡಗುವಂತೆ ಮಾಡುವುದು ಏಕೈಕ ಉಪಾಯವಾಗಿದೆ. ಈ ನಿಟ್ಟಿನಲ್ಲಿ ಕ್ರೀಡಾ ಇಲಾಖೆ ವತಿಯಿಂದ 6 ವರ್ಷ ಮೇಲ್ಪಟ್ಟು ಹಾಗೂ 16 ವರ್ಷದೊಳಗಿನ ಬಾಲಕ/ಬಾಲಕೀಯರಿಗೆ ಬೆಳಿಗ್ಗೆ ಹಾಗೂ ಸಾಯಾಂಕಾಲ ಕನಿಷ್ಠ ಫೀ–ನಲ್ಲಿ ವಿವಿಧ ರೀತಿಯ ಕ್ರೀಡೆಗಳಾದ ಶೆಟಲ್ ಬ್ಯಾಡ್ಮಿಂಟನ್ ಕ್ರೀಡೆ ತಬೇತುದಾರರಾದ ರಾಮಲಿಂಗಪ್ಪ ಮೊಬೈಲ್ ಸಂಖ್ಯೆ: 8971737656, ಟೇಬಲ್ ಟೆನ್ನಿಸ್ ಕ್ರೀಡೆ ತಬೇತುದಾರರಾದ ಎಮ್.ಎನ್ ಈರಣ್ಣ ಮೊಬೈಲ್ ಸಂಖ್ಯೆ: 9448837766, ಈಜು ಕ್ರೀಡೆ ತಬೇತುದಾರರಾದ ಇಬ್ರಾಹಿಮ್ ಮೊಬೈಲ್ ಸಂಖ್ಯೆ: 9739875798, ಬಾಸ್ಕೆಟ್‌ಬಾಲ್ ಕ್ರೀಡೆ ತಬೇತುದಾರರಾದ ದೇವಪ್ಪ ಮೊಬೈಲ್ ಸಂಖ್ಯೆ: 9739686843, ವಾಲಿಬಾಲ್, ಥ್ರೋ–ಬಾಲ್ ಕ್ರೀಡೆ ತಬೇತುದಾರರಾದ ವೆಂಕಟೇಶ್ ಮೊಬೈಲ್ ಸಂಖ್ಯೆ: 8310222353, ಕರಾಟೆ ತಬೇತುದಾರರಾದ ಅನಿರುದ್ಧ್ ಮೊಬೈಲ್ ಸಂಖ್ಯೆ: 8971117995ಗೆ ಸಂಪರ್ಕ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣ ರಾಯಚೂರು ಕಚೇರಿಗೆ ಕಚೇ–ರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ ನಾಯಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನವದೆಹಲಿಯ ಸಂಸತ್ ಭವನದಲ್ಲಿ ಸುಧಾ ಮೂರ್ತಿ ಅವರು ರಚಿಸಿರುವ,"ಟೈಡ್ಸ್ ಆಫ್ ಟೈಮ್" ಕಾಫಿ ಟೇಬಲ್ ಪುಸ್ತಕ ಬಿಡುಗಡೆ

ನೈಜ್ಯ ದೇಸೆ ನ್ಯೂಸ್

**ದೆಹಲಿ: ರಾಜ್ಯಸಭಾ ಸದಸ್ಯೆ, ಖ್ಯಾತ ಲೇಖಕಿ ಹಾಗೂ ಸಮಾಜಸೇವಕಿಯಾಗಿರುವ ಸುಧಾ ಮೂರ್ತಿ ಅವರು ರಚಿಸಿರುವ, ಲೋಕಸಭಾ ಕಾರ್ಯಾಲಯದಿಂದ ಪ್ರಕಟಿತವಾದ "ಟೈಡ್ಸ್ ಆಫ್ ಟೈಮ್" ಕಾಫಿ ಟೇಬಲ್ ಪುಸ್ತಕದ ಬಿಡುಗಡೆ ಸಮಾರಂಭವು ನವದೆಹಲಿಯ ಸಂಸತ್ ಭವನದ ಸಂವಿಧಾನ ಸದನದಲ್ಲಿ ಅತ್ಯಂತ ಗೌರವಯುತ ವಾತಾವರಣದಲ್ಲಿ ನೆರವೇರಿತು.**

ಭಾರತೀಯ ಸಂಸತ್ತಿನ ವೈಭವಯುತ ಇತಿಹಾಸ, ಸಂಸತ್ತಿನ ಕಾರ್ಯಪದ್ಧತಿ, ಜನತಾಂತ್ರಿಕ ಮೌಲ್ಯಗಳು ಹಾಗೂ ಕಾಲಾನುಗತವಾಗಿ ರೂಪುಗೊಂಡ ಸಂಸದೀಯ ಪರಂಪರೆಗಳನ್ನು ದೃಶ್ಯಮಯವಾಗಿ ದಾಖಲಿಸಿರುವ ಈ ಕೃತಿ, ಸಂಸತ್ತಿನ ಪಯಣವನ್ನು ಹೊಸ ಪೀಳಿಗೆಗೆ ಪರಿಚಯಿಸುವ ಮಹತ್ವದ ದಾಖಲೆ ಎಂದು ಪರಿಗಣಿಸಲಾಗಿದೆ. ಈ ವಿಶೇಷ ಕಾರ್ಯಕ್ರಮದಲ್ಲಿ ರಾಯಚೂರು ಹಾಗೂ ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಜಿ ಕುಮಾರ್ ನಾಯಕ ಅವರು ಭಾಗವಹಿಸಿ ಕಾರ್ಯಕ್ರಮದ ಗೌರವವನ್ನು ಹೆಚ್ಚಿಸಿದರು. ದೇಶದ ಗೌರವಾನ್ವಿತ ಉಪರಾಷ್ಟ್ರಪತಿ ಹಾಗೂ ರಾಜ್ಯಸಭೆಯ ಸಭಾಪತಿಯಾದ ಸಿ.ಪಿ. ರಾಧಾಕೃಷ್ಣನ್ ಅವರ ನೇತೃತ್ವದಲ್ಲಿ ಪುಸ್ತಕವನ್ನು



ಅಧಿಕೃತವಾಗಿ ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಲೋಕಸಭಾ ಅಧ್ಯಕ್ಷರಾದ ಓಂ ಬಿರ್ಲಾ ಅವರು ಮಾತನಾಡಿ, ಸಂಸತ್ತಿನ ಇತಿಹಾಸವನ್ನು ಜನಸಾಮಾನ್ಯ–ರಿಗೂ ಸುಲಭವಾಗಿ ಪರಿಚಯಿಸುವಲ್ಲಿ ಇಂತಹ ಕಾಫಿ ಟೇಬಲ್ ಪುಸ್ತಕಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು. ರಾಜ್ಯಸಭೆಯ ಉಪಸಭಾಪತಿಯಾದ ಹರಿವಂಶ್ ನಾರಾಯಣ್ ಸಿಂಗ್ ಹಾಗೂ ಹಿರಿಯ ರಾಜ್ಯಸಭಾ ಸದಸ್ಯರಾದ ಜೈರಾಮ್ ರಮೇಶ್ ಸೇರಿದಂತೆ ಎರಡೂ ಸದನಗಳ ಅನೇಕ ಸಂಸದರು, ಸಂಸತ್ ಅಧಿಕಾರಿಗಳು ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದರು. ಪುಸ್ತಕ ಬಿಡುಗಡೆ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ಭಾರತೀಯ ಪ್ರಜಾಪ್ರಭುತ್ವದ ಬಲಿಷ್ಠ ಪರಂಪರೆ ಮತ್ತು ಸಂಸತ್ತಿನ ಕಾರ್ಯಪಟುತೆಯನ್ನು ದಾಖಲಿಸುವ ಸಾಹಿತ್ಯಿಕ ಪ್ರಯತ್ನಗಳು ರಾಷ್ಟ್ರದ ಇತಿಹಾಸ



ಸಂರಕ್ಷಣೆಗೆ ಅಗತ್ಯವೆಂದು ಅಭಿಪ್ರಾಯಪಟ್ಟರು.

ಸಂಸತ್ತು ಕೇವಲ ಕಾನೂನು ರಚನೆ ಮಾಡುವ ವೇದಿಕೆಯಷ್ಟೇ ಅಲ್ಲದೆ, ದೇಶದ ಪ್ರಜಾಪ್ರಭುತ್ವದ ಆತ್ಮವನ್ನು ಪ್ರತಿನಿಧಿಸುವ ಸಂಸ್ಥೆಯಾಗಿದ್ದು, ಅದರ ಪಯಣವನ್ನು ದಾಖಲಿಸುವುದು ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು. "ಟೈಡ್ಸ್ ಆಫ್ ಟೈಮ್" ಕೃತಿ ಸಂಸತ್ತಿನ ವೈಭವ, ಸಂವಿಧಾನದ ಮೌಲ್ಯಗಳು ಹಾಗೂ ಭಾರತದ ಜನತಾಂತ್ರಿಕ ಅಭಿವೃದ್ಧಿಯ ಪಯಣವನ್ನು ಚಿತ್ರಗಳು ಮತ್ತು ದಾಖಲಾತಿಗಳ ಮೂಲಕ ಸೊಗಸಾಗಿ ಪರಿಚಯಿಸುವ ವಿಶಿಷ್ಟ ಕೃತಿಯಾಗಿದ್ದು, ಸಂಶೋಧಕರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕ–ರಿಗೆ ಉಪಯುಕ್ತ ಮಾಹಿತಿಯ ಸಂಪನ್ಮೂಲವಾಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಯಿತು.

# ಉದ್ಯಮಿಗಳು ಕೈಗಾರಿಕಾ ಸ್ಥಾಪನೆಗೆ ಮುಂದೆ ಬನ್ನಿ: ಸಚಿವ ಎನ್.ಎಸ್.ಬೋಸರಾಜು

ನೈಜ್ಯ ದೇಸೆ ನ್ಯೂಸ್

**ರಾಯಚೂರು: ಕೇಂದ್ರ ಹಾಗೂ ರಾಜ್ಯ ಸರ್ಕಾರವು ಕೈಗಾರಿಕೆಗಳ ಸ್ಥಾಪನೆಗೆ ಸಹಕಾರ ನೀಡುತ್ತಿದ್ದು, ಆಸಕ್ತರು ಉದ್ಯಮಿಗಳು ಕೈಗಾ–ರಿಕಾ ಸ್ಥಾಪನೆಗೆ ಮುಂದೆ ಬರಬೇಕೆಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಹೇಳಿದರು.**

ಏಪ್ರಿಲ್ 02ರ ಗುರುವಾರ ದಂದು ನಗರದ ಕೃಷಿ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ಭಾರತ ಸರ್ಕಾರ ಉದ್ಯಮ ಮತ್ತು ಅಂತರಿಕ ವ್ಯಾಪಾರ ಉತ್ತೇಜನ ಇಲಾಖೆ, ಸ್ಟಾರ್ಟ್ ಅಪ್ ಇಂಡಿಯಾ ಯೋಜನೆ ಹಾಗೂ ಜಿಲ್ಲಾಡಳಿತ ರಾಯಚೂರು ಇವರು ಸಂಯುಕ್ತಾಶ್ರಯದಲ್ಲಿ ತೇಜಸ್ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಕೈಗಾರಿಕಾ ಸ್ಥಾಪನೆಗೆ ಒಳ್ಳೆಯ ವಾತಾವರಣ ಇದೆ. ಜಿಲ್ಲೆಯಲ್ಲಿ ಎರಡು ನದಿ, ವಿದ್ಯುತ್ ಉತ್ಪಾದನೆ, ಹತ್ತಿ, ಭತ್ತ ಹೆಚ್ಚಾಗಿ ದೊರೆಯುತ್ತದೆ. ಭಾರತ್ ಮಾಲ್ ರಸ್ತೆಯು ಸಹ ಇದೆ. ಈ ಭಾಗದಲ್ಲಿ ಕೈಗಾರಿಕಾ ಸ್ಥಾಪನೆಗೆ ಯಾರು ಅರ್ಜಿ ಹಾಕುವುದಿಲ್ಲ.

ಸ್ಥಳೀಯರು ಕೈಗಾ–ರಿಕೆ ಸ್ಥಾಪಿಸಲು ಮುಂದೆ ಬರಬೇಕೆಂದರು. ದೇಶದಲ್ಲಿ ಮೊದಲ ಬಾರಿಗೆ ರಾಯಚೂರು ಜಿಲ್ಲೆಯಲ್ಲಿ




ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ವಿವಿಧ ತಾಲೂಕು ಮಟ್ಟದಲ್ಲಿ ಕಾರ್ಯಾಗಾರವನ್ನು ನಡೆಸಿ, ಸಲಹೆ–ಸೂಚನೆಗಳನ್ನು ಪಡೆಯಬೇಕು. ಕೃಷಿಗೆ ಸಂಬಂಧಿಸಿದ ಅನೇಕ ಕೈಗಾರಿಕೆಗಳನ್ನು ಸ್ಥಾಪಿಸಲು ಶ್ರಮಿಸಬೇಕು. ಇಲ್ಲಿ ಎಲ್ಲಾ ರೀತಿಯ ಕಚ್ಚಾ ವಸ್ತುಗಳ ದೊರೆಯುತ್ತವೆ. ಸೈನ್ಸ್ ಸಿಟಿ ಪ್ರಾರಂಭಿಸಲು ಭೂಮಿಯನ್ನು ಕೇಳಲಾಗಿದ್ದು, ಈಗಾಗಲೇ 300 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿ, ಬೆಂಗಳೂ–ರಿನಲ್ಲಿ ನಿರ್ಮಿಸಲು ಕ್ರಮ ವಹಿಸಲಾಗಿದೆ ಎಂದರು. ಕರ್ನಾಟಕವು ತಲಾ ಆದಾಯದಲ್ಲಿ ದೇಶದಲ್ಲೇ ಮೊದಲನೆಯ ಸ್ಥಾನವನ್ನು ಪಡೆದಿದೆ. ರಾಯಚೂರು ಜಿಲ್ಲೆಯಲ್ಲಿ ಆದ–'ಷ್ಟು ಬೇಗನೆ ವಿಮಾನ ನಿಲ್ದಾಣ ಕಾಮಗಾರಿಯು ಪೂರ್ಣಗೊಳ್ಳಲಿದೆ. ಅಲ್ಲದೆ ರೈಲ್ವೆ ಸಂಪರ್ಕ ಕಾಮಗಾರಿ ಯೋಜನೆಯು ನಡೆಯುತ್ತದೆ ಎಂದರು. ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಮಾತನಾಡಿ, ಸ್ಟಾರ್ಟ್ ಆಫ್ ಇಂಡಿಯಾ ಎಂದರೆ ಕೇವಲ ದೊಡ್ಡ, ದೊಡ್ಡ ಸಿಟಿ ಎಂಬ ಕಲ್ಪನೆ ಕೆಲವರು ಭಾವಿಸಿದ್ದಾರೆ.

ಸ್ಟಾರ್ಟ್ ಆಫ್ ಕುರಿತು ತರಬೇತಿಯನ್ನು ಪಡೆಯಲು ಸಿಟಿಗಳಿಗೆ ಹೋಗಿ ಸಾವಿರ ರೂಪಾಯಿಗಳನ್ನು ಖರ್ಚು ಮಾಡಿ ತರಬೇತಿಯನ್ನು ಪಡೆಯುತ್ತಾರೆ. ಆದರೆ ರಾಯಚೂರಿನಲ್ಲಿ ಉಚಿತವಾಗಿ ನೀಡಲಾಗುತ್ತಿದ್ದು, ಆಸಕ್ತರು ಚೆನ್ನಾಗಿ ತರಬೇತಿಯಲ್ಲಿ ತಿಳಿದುಕೊಳ್ಳಬೇಕು. ತರಬೇತಿ ನೀಡಲು ದೆಹಲಿಯಿಂದ ವಿಶೇಷ ತಂಡವು ಬಂದಿದೆ. ಅವರು ನೀಡುವ ಸಲಹೆಗಳನ್ನು





ಸರಿಯಾಗಿ ಪಾಲನೆ ಮಾಡಬೇಕು. ಮುಂದೆ ವಿದ್ಯಾರ್ಥಿಗಳು ಯಾರ ಕೈಕೆಳಗೆ ಕೆಲಸ ಮಾಡದೆ ಸ್ವಂತ ಉದ್ಯೋಗವನ್ನು ಪ್ರಾರಂಭಿಸಬೇಕೆಂದರು. ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಜಿಲ್ಲಾ ನೋಡಲ್ ಅಧಿಕಾರಿ ಮಹಮ್ಮದ್ ಯೂಸುಫ್ ಅವರು ಮಾತನಾಡಿ, ದೇಶದಲ್ಲೇ ಮೊದಲ ಬಾರಿಗೆ ರಾಯಚೂರಿನಲ್ಲಿ ಆಯೋಜಿಸಲಾಗುತ್ತಿದ್ದು, ಇದು ಭಾರತದ ಉದ್ಯಮಶೀಲತೆಯನ್ನು ತಳಮಟ್ಟಕ್ಕೆ ತಲುಪಿಸುವ ಪ್ರಯತ್ನದಲ್ಲಿ ಮಹತ್ವದ ಮೈಲುಗಲ್ಲಾಗಿದೆ.

ಅಪಾರ ಉದ್ಯಮಶೀಲ ಸಾಮರ್ಥ್ಯವನ್ನು ಹೊಂದಿದೆ. ಯುವಕರು, ಮಹಿಳೆಯರು ಮತ್ತು ಮೊದಲ ಬಾರಿಗೆ ಉದ್ಯಮ ಆರಂಭಿಸುವವ–ರಿಗೆ ಅವಕಾಶಗಳನ್ನು ಒದಗಿಸುವ ಮೂಲಕ ಬಲಿಷ್ಠ ಸ್ಟಾರ್ಟ್ ಆಪ್ ಪರಿಸರವನ್ನು ನಿರ್ಮಿಸಲು ಜಿಲ್ಲಾಡಳಿತ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ.ಈ ಕಾರ್ಯಾಗಾರವು ಆಸಕ್ತ ಉದ್ಯಮಿಗಳು, ವಿದ್ಯಾರ್ಥಿಗಳು, ನವೋದ್ಯಮಿಗಳು, ಕೈಗಾರಿಕಾ ತಜ್ಞರು ಮತ್ತು ಪರಿಸರ ಸಹಭಾಗಿಗಳನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿ, ಜ್ಞಾನ ಹಂಚಿಕೆ, ಮಾರ್ಗದರ್ಶನ ಮತ್ತು ನೆಟ್ವರ್ಕಿಂಗ್ಗೆ ಅವಕಾಶ ಕಲ್ಪಿಸುತ್ತದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಐಐಐಟಿ ರಾಯಚೂರು ನಿರ್ದೇಶಕರಾದ ಪ್ರೋ.ಹರೀಶ್ ಕುಮಾರ್ ಸರ್ದಾನಾ, ಶಿಲ್ಪಾ ಮೆಡಿಕೇರ್ ಲಿಮಿಟೆಡ್ ಅಧ್ಯಕ್ಷರಾದ ವಿಷ್ಣುಕಾಂತ ಭುತಡ, ರಾಸಾಯನಿಕ ತಯಾರಿಕ ಸಂಘದ ಅಧ್ಯಕ್ಷರಾದ ಡಾ.ರಮೇಶ, ರೈಸ್ ಮಿಲ್ಲರ್ಸ್ ಅಸೋಸಿಯೇಷನ್ ಅಧ್ಯಕ್ಷರಾದ ಸಾವಿತ್ರಿ ಪುರುಷೋತ್ತಮ, ಜಿಲ್ಲಾ ವಾಣಿಜ್ಯೋದ್ಯಮಿಗಳ ಸಂಘದ ಅಧ್ಯಕ್ಷರಾದ ಎಸ್. ಕಮಲ್ ಕುಮಾರ, ಕಾಟನ್ ಮಿಲ್ಲರ್ಸ್ ಅಸೋಸಿಯೇಷನ್ ಅಧ್ಯಕ್ಷರಾದ ವಿ. ಲಕ್ಷ್ಮೀಕಾಂತರೆಡ್ಡಿ, ಡಿಪಿಐಐಟಿ ಸ್ಟಾರ್ಟ್‌ಅಪ್ ಇಂಡಿಯಾ ಅಸೋಸಿಯೇಟ್‌ಗಳಾದ ರೋಹನ್ ಸಚ್‌ದೇವ, ರವಿ, ಇಶ್ದೀಪ್ ಸಿಂಗ್, ಆಕಾಂಕ್ಷೆ ಗುಪ್ತ, ಭರತ್ ಚಂದ್ರ ಬಿ.ಕೆ., ಸಿ ಎಂ ಪಾಟೀಲ್ ಸೇರಿದಂತೆ ಇತರರು ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬಿ.ಟೆಕ್ ಪೆಟ್ರೋಕೆಮಿಕಲ್ ಎಂಜಿನಿಯರಿಂಗ್

ಬಿ.ಟೆಕ್ ಪೆಟ್ರೋಕೆಮಿಕಲ್ ಎಂಜಿನಿಯರಿಂಗ್ ನಾಲ್ಕು ವರ್ಷಗಳ, ಪೂರ್ಣ ಸಮಯದ ಎಂಜಿನಿಯರಿಂಗ್ ಪದವಿಪೂರ್ವ ಕಾರ್ಯಕ್ರಮವಾಗಿದೆ. ಒಟ್ಟಾರೆ ಆರ್ಥಿಕತೆಗೆ ಉಪಯುಕ್ತವೆಂದು ಪರಿಗಣಿಸಲಾದ ವಸ್ತುಗಳನ್ನು ಹೊರತೆಗೆಯಲು ಮತ್ತು ಮರುಬಳಕೆ ಮಾಡಲು ಪ್ರಕ್ರಿಯೆ ವ್ಯವಸ್ಥೆಗಳ ಪ್ರಮಾಣೀಕೃತ ಉತ್ಪಾದನೆ ಮತ್ತು ಕಾರ್ಯಾಚರಣೆಯ ಬಗ್ಗೆ ವಿದ್ಯಾರ್ಥಿಗಳಿಗೆ ಕಲಿಸುವುದು ಕೋರ್ಸ್‌ನ ಗುರಿಯಾಗಿದೆ. ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರ, ಭೂವಿಜ್ಞಾನ, ಅರ್ಥಶಾಸ್ತ್ರ, ಉಷ್ಣಬಲ ವಿಜ್ಞಾನ ಮತ್ತು ಇತರ ವಿಷಯಗಳನ್ನು ಈ ಕೋರ್ಸ್‌ನಲ್ಲಿ ವಿವರವಾಗಿ ಚರ್ಚಿಸಲಾಗಿದೆ. ಪೆಟ್ರೋಕೆಮಿಕಲ್ ಮತ್ತು ಪೆಟ್ರೋಲಿಯಂ ರಿಫೈನರಿ ಎಂಜಿನಿಯರಿಂಗ್‌ನಲ್ಲಿ ಬಿ.ಟೆಕ್ ಪದವಿ ಪಡೆಯಲು ಅರ್ಹತಾ ಮಾನದಂಡವೆಂದರೆ ವಿಜ್ಞಾನ ವಿಭಾಗದಲ್ಲಿ 10+2 ಅನ್ನು ಯಶಸ್ವಿಯಾಗಿ ಪೂರ್ಣಗೊಳಿಸುವುದು. ಹೆಚ್ಚುವ-ರಿಯಾಗಿ, ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ ಮತ್ತು ಇಂಗ್ಲಿಷ್‌ನಲ್ಲಿ ಶೇ. 50 ರಷ್ಟು ಸಂಚಿತ ಗ್ರೇಡ್ ಪಾಯಿಂಟ್ ಸರಾಸರಿಯನ್ನು ಸಾಧಿಸುವುದು ಅಗತ್ಯವಾಗಿರುತ್ತದೆ. ಪೆಟ್ರೋಕೆಮಿಕಲ್ ಕ್ಷೇತ್ರದಲ್ಲಿ ಪದವಿ ಪಡೆದವರು ಮಹತ್ವಾಕಾಂಕ್ಷಿ ಸಂಶೋಧಕರಿಗೆ ಹಲವಾರು ಅವಕಾಶಗಳನ್ನು ತೆರೆಯುತ್ತಾರೆ. ಮುಂದೆ, ಅವರು ಸಂಸ್ಕರಣಾ ಉತ್ಪನ್ನಗಳು, ನೈಸರ್ಗಿಕ ಅನಿಲ, ಪ್ಲಾಸ್ಟಿಕ್, ರಬ್ಬರ್ ಮತ್ತು ಫೈಬರ್ ಕಚ್ಚಾ ವಸ್ತುಗಳು ಸೇರಿದಂತೆ ಸಾವಯವ ಮಧ್ಯಂತರ ಉತ್ಪನ್ನಗಳೊಂದಿಗೆ ಪ್ರಯೋಗ ಮಾಡಲು ಸಾಧ್ಯವಾಗುತ್ತದೆ. ಭಾರತದ ಆರ್ಥಿಕತೆ ಮತ್ತು ಅಭಿವೃದ್ಧಿಗೆ ಪೆಟ್ರೋಕೆಮಿಕಲ್ ಉದ್ಯಮವು ಅತ್ಯಗತ್ಯ. ಬಿ.ಟೆಕ್ ಪೆಟ್ರೋಲಿಯಂ ಎಂಜಿನಿಯರಿಂಗ್ ಪದವೀಧರರು ವಾರ್ಷಿಕ INR 3, 30,000 ದಿಂದ INR 20, 00,000 ವರೆಗಿನ ಉದ್ಯೋಗ ಪ್ಯಾಕೇಜ್ ನಿರೀಕ್ಷಿಸಬಹುದು. ಪ್ರಮುಖ ನೇಮಕಾತಿ ಕಂಪನಿಗಳು: ಆಯಿಲ್ ಅಂಡ್ ನ್ಯಾಚುರಲ್ ಗ್ಯಾಸ್ ಕಾರ್ಪೊರೇಷನ್ ಲಿಮಿಟೆಡ್ (ONGC), ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (BPCL), ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್ (IOCL), ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (HPCL), GAIL, ಎಸ್ಸಾರ್ ಆಯಿಲ್, ಹಿಂದೂಸ್ತಾನ್ ಆಯಿಲ್ ಎಕ್ಸ್‌ಪ್ಲೋರೇಶನ್ ಕಂಪನಿ ಲಿಮಿಟೆಡ್ (HOEC)

## ಬೇಸಿಗೆಯಲ್ಲಿ ಮಕ್ಕಳ ಆರೋಗ್ಯದ ಕಡೆಗೆ ಗಮನ ಅಗತ್ಯ :ಜಿಲ್ಲಾ ಉಪ ಆರೋಗ್ಯ ಶಿಕ್ಷಣಾಧಿಕಾರಿಗಳು ಬಸ್ಸಯ್ಯ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಆರೋಗ್ಯ ಮತ್ತು ಕ್ಷೇಮ ಮಂದಿರ ಗೌಡನಬಾವಿ ಇವರ ಸಂಯುಕ್ತ ಆಶ್ರಯದಲ್ಲಿ ಬೇಸಿಗೆಯಲ್ಲಿ ಮಕ್ಕಳ ಆರೋಗ್ಯದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.**

ಕಾರ್ಯಕ್ರಮದ ಕುರಿತು ಮಾತನಾಡಿದ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸ್ಸಯ್ಯ ಅವರು ಬಿಸಿಲಿನ ತಾಪಮಾನದಿಂದ ದೇಹದಲ್ಲಿ ಉಷ್ಣತೆ ಹೆಚ್ಚುತ್ತದೆ ಅದಕ್ಕಾಗಿ ಪಾಲಕರು ಮಕ್ಕಳ ಆರೋಗ್ಯದ ಕುರಿತು ಏನೆಲ್ಲಾ ಕ್ರಮಗಳನ್ನು ಕೈಗೊಳ್ಳಬೇಕು ಎಂದರು ತಿಳಿಸಿದರು.ಸಡಿಲವಾದ ಉಡುಪು ಮತ್ತು ಬಿಳಿ ಬಟ್ಟೆಯನ್ನು ಧರಿಸಬೇಕು, ಮನೆಯಲ್ಲಿ ತಯಾರಿಸಿದ ಆಹಾರ ಸೇವನೆ ಮಾಡಬೇಕು ಹಣ್ಣು ತರಕಾರಿಗಳನ್ನು ಹೆಚ್ಚು ಸೇವನೆ ಮಾಡಬೇಕು ಬಿಸಿಲಿನಲ್ಲಿ ಹೋಗುವಾಗ ಟೋಪಿ. ಚತ್ರಿ. ಕರವಸ್ತ್ರ .ಟೇವಲ್ ಬಳಿಸಬೇಕು.





ಮಧ್ಯಾಹ್ನ 12 ಗಂಟೆಯ ನಂತರ ಸಾಯಂಕಾಲದವರೆಗೆ ನೆರಳಿನಲ್ಲಿರಬೇಕು ಒದ್ದೆ ಬಟ್ಟೆಯನ್ನು ಹಾಕಿ ತಲೆಯನ್ನು ಒರೆಸಿಕೊಳ್ಳಬೇಕು ಒಟ್ಟಾರೆ ಮಕ್ಕಳ ಆರೋಗ್ಯದ ಕಡೆಗೆ ಗಮನ ಹರಿಸಿ ಎಂದು ತಾಯಿಂದಿರಿಗೆ ಸಲಹೆಗಳನ್ನು ನೀಡಿದರು, ನಂತರ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಬೇಸಿಗೆಯಲ್ಲಿ ಮಕ್ಕಳ ಹಾಗೂ ಹಿರಿಯ ನಾಗ-ರಿಕರ ಆರೈಕೆ ಮುಖ್ಯವಾಗಿದೆ ಬಿಗಿಯಾದ ಬಟ್ಟೆಯನ್ನು ಹಾಕಬಾರದು ರಸ್ತೆ ಬದಿ ತೆರೆದಿಟ್ಟ ಯಾವುದೇ ಆಹಾರವನ್ನು ತಿನ್ನಬೇಡಿ. ಕಾಫಿ ಚಹಾ ಮದ್ಯಪಾನ ಹಾಗೂ ಅತಿಯಾದ ಸಕ್ಕರೆಯುಕ್ತ ಆಹಾರವನ್ನು ಸೇವನೆ ಮಾಡಬೇಡಿ ಅತಿಯಾದ ತಣ್ಣೀರು ಐಸ್ ಹಾಗೂ ಅತಿಯಾದ ತಂಪು ಬಟ್ಟೆಯಿಂದ ದೇಹವನ್ನು ಒರಿಸಿಕೊಳ್ಳವುದು ಬೇಡ ಶುದ್ದವಾದ ನೀರನ್ನು ಕುಡಿಯಿರಿ ಮತ್ತು ಬಯಲು ಮಲವಿಸರ್ಜನೆ ಮಾಡಬೇಡಿ ಮಧ್ಯಾಹ್ನದ ಬಿಸಿಲಿನಲ್ಲಿ ಅತಿಯಾದ ಶ್ರಮದ ಕೆಲಸವನ್ನು ಮಾಡಬೇಡಿ.

ಬಿಸಿಲಿನ ಬೇಗಿಯಿಂದ ರಕ್ಷಣೆ ಮಾಡಿಕೊಂಡು ನಮ್ಮ ಆರೋಗ್ಯವನ್ನು ಹಾಗೂ ನಮ್ಮ ಮಕ್ಕಳ ಆರೋಗ್ಯವನ್ನು ಕಾಪಾಡಿಕೊಳ್ಳುವುದು ನಮ್ಮ ಜವಾಬ್ದಾರಿ ಹೆಚ್ಚಾಗಿರುತ್ತದೆ ಎಂದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಪಾರ್ವತಿ. ಆರೋಗ್ಯ ನಿರೀಕ್ಷಣಾಧಿಕಾರಿ ಉದಯಕುಮಾರ. ಆಶಾ ಕಾರ್ಯಕರ್ತರಾದ ಬಸವಲಿಂಗಮ್ಮ. ಲಕ್ಷ್ಮಿ. ಅಂಗನವಾಡಿ ಕಾರ್ಯಕರ್ತರು ಮತ್ತು ತಾಯಂದಿರು ಉಪಸ್ಥಿತರಿದ್ದರು.

## ಬುಕನಟ್ಟಿ ಗ್ರಾಮದಲ್ಲಿ ಎನ್.ಸಿ.ಡಿ ಕ್ಲಿನಿಕ್ ಹಾಗೂ ವ್ಯಸನಮುಕ್ತ ಆರೋಗ್ಯ ಶಿಕ್ಷಣ ಕಾರ್ಯಕ್ರಮ



ನೈಜ್ಯ ದೆಸೆ ನ್ಯೂಸ್

ತುರ್ವಿಹಾಳ: ಸಿಂಧನೂರು ತಾಲೂಕಿನ ತುರ್ವಿಹಾಳ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಇಂದು ಬುಕನಟ್ಟಿ ಗ್ರಾಮದಲ್ಲಿ ಅಸಾಂಕ್ರಾಮಿಕ ರೋಗಗಳ ತಪಾಸಣಾ ಶಿಬಿರ ಮತ್ತು ಆರೋಗ್ಯ ಶಿಕ್ಷಣ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದ ಮೂಲಕ ಗ್ರಾಮದ ಸಾರ್ವಜನಿಕರಿಗೆ ರಕ್ತದೊತ್ತಡ ಮತ್ತು ಮಧುಮೇಹದಂತಹ



**ಅಸಾಂಕ್ರಾಮಿಕ ರೋಗಗಳ ಬಗ್ಗೆ ಉಚಿತ ತಪಾಸಣೆ ನಡೆಸಿ, ಅಗತ್ಯವಿರುವವರಿಗೆ ಸೂಕ್ತ ಚಿಕಿತ್ಸೆ ಮತ್ತು ಔಷಧಗಳನ್ನು ನೀಡಲಾಯಿತು.**

ತಪಾಸಣೆಯ ಜೊತೆಗೆ ಮದ್ಯಪಾನ ಮತ್ತು ತಂಬಾಕು ಸೇವನೆಯಿಂದ ಉಂಟಾಗುವ ಗಂಭೀರ ಆರೋಗ್ಯ ಸಮಸ್ಯೆಗಳ ಕುರಿತು ಗ್ರಾಮಸ್ಥರಿಗೆ ವಿಶೇಷ ಮಾಹಿತಿ ನೀಡಲಾಯಿತು. ತಂಬಾಕು ಸೇವನೆಯು ಬಾಯಿ ಕ್ಯಾನ್ಸರ್ ಮತ್ತು ಶ್ವಾಸಕೋಶದ ಕಾಯಿಲೆಗಳಿಗೆ ಹೇಗೆ ದಾರಿ ಮಾಡಿಕೊಡುತ್ತದೆ ಹಾಗೂ ಮದ್ಯಪಾನದಿಂದ ಲಿವರ್ ವೈಫಲ್ಯ ಮತ್ತು ಹೃದಯ ಸಂಬಂಧಿ ತೊಂದರೆಗಳು ಹೇಗೆ ಉಂಟಾಗುತ್ತವೆ ಎಂಬುದರ ಬಗ್ಗೆ ತಾಲೂಕಿನ ಮೇಲ್ವಿಚಾರಕ ಎಫ್.ಎ.ಹಣಗಿ ವಿವರವಾಗಿ ತಿಳಿಸಿದರು.

ಚಟಮುಕ್ತ ಜೀವನ ಶೈಲಿಯನ್ನು ಅಳವಡಿಸಿಕೊಳ್ಳುವ ಮೂಲಕ ಆರೋಗ್ಯಕರ ಸಮಾಜವನ್ನು ನಿರ್ಮಿಸಲು ಪ್ರತಿಯೊಬ್ಬರು ಮುಂದಾಗಬೇಕು ಎಂದು ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ವತಿಯಿಂದ ಕರೆ ನೀಡಲಾಯಿತು. ಹಾಗೂ ಆಂಜನೇಯ ಹಿ.ಶುಷ್ರಶಕ ಅಧಿಕಾರಿ ಹಾಗೂ ಆರೋಗ್ಯ ಸಿಬ್ಬಂದಿಗಳಾದ ಯಲ್ಲಮ್ಮ,ಮಹಾಂತಪ್ಪ,ಗುರುನಾಥ,ಛತ್ರಪ್ಪ ರವರಿಂದ ಸ್ಥಳಿಯರಿಗೆ ಪರೀಕ್ಷಿಸಿ ಆರೋಗ್ಯ ಶಿಬಿರ ನಡೆಸಿಕೊಟ್ಟರು ಈ ಕಾರ್ಯಕ್ರಮದಲ್ಲಿ ತುರ್ವಿಹಾಳ ಪ್ರಾಥಮಿಕ ಆರೋಗ್ಯ ಕೇಂದ್ರ, ಆರೋಗ್ಯ ಕ್ಷೇಮ ಕೇಂದ್ರದ ಸಿಬ್ಬಂದಿ ಯಲ್ಲಮ್ಮ,ಛತ್ರಪ್ಪ, ಆಶಾ ಕಾರ್ಯಕರ್ತೆಯರು,-ಅಂಗನವಾಡಿ ಕಾ.ಕರ್ತೆಯರು ಹಾಜರಿದ್ದರು ಹಾಗೂ ಗ್ರಾಮದ ಮುಖಂಡರು ಮತ್ತು ಸಾರ್ವಜನಿಕರು ಪಾಲ್ಗೊಂಡು ಸೇವೆ ಪಡೆದರು.

## ಶಾಸ್ತ್ರೋಕ್ತವಾಗಿ ಸಮಾಪ್ತಿಗೊಂಡ ವಿಶ್ವ ವಿಖ್ಯಾತ ಕರಗ ಉತ್ಸವ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ವಿಶ್ವ ವಿಖ್ಯಾತ ಐತಿಹಾಸಿಕ ಬೆಂಗಳೂರು ಕರಗ ಮಹೋತ್ಸವವು ಶಾಸ್ತ್ರೋಕ್ತವಾಗಿ ಸಮಾಪ್ತಿಯಾಗಿದೆ. ಕಳೆದ ರಾತ್ರಿ 2.10 ಗಂಟೆಗೆ ಕರಗ ಮಹೋತ್ಸವಕ್ಕೆ ವಿಜೃಂಭಣೆಯಿಂದ ವಿದ್ಯುಕ್ತ ಚಾಲನೆ ದೊರೆತಿದ್ದು, ಬಿಬಿಎಂಪಿ, ಪೊಲೀಸ್ ಇಲಾಖೆ ಹಾಗೂ ಬೆಂಗಳೂರು ನಗರ ಜಿಲ್ಲಾಡಳಿತದ ಸಮರ್ಪಕ ಸಿದ್ಧತೆಗಳ ನಡುವೆ ಯಶಸ್ವಿಯಾಗಿ ನೆರವೇರಿತು.**

ಈ ಬಾರಿ ಕರಗ ಉತ್ಸವದಲ್ಲಿ ಸುಮಾರು 10 ಲಕ್ಷಕ್ಕೂ ಅಧಿಕ



ಭಕ್ತರು ಭಾಗವಹಿಸಿ ದೇವಿಯ ದರ್ಶನ ಪಡೆದರು. ಐತಿಹಾಸಿಕ ಬೆಂಗಳೂರು ಧರ್ಮರಾಯಸ್ವಾಮಿ ದ್ರೌಪದಿ ಕರಗ ಉತ್ಸವ ಈ ವರ್ಷವೂ ಅದ್ದೂ-ರಿಯಾಗಿ ಜರುಗಿದ್ದು, ಕಳೆದೊಂದು ವಾರದಿಂದ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳು ನೆರವೇರಿದ್ದವು. ಧರ್ಮರಾಯಸ್ವಾಮಿ ದೇವಸ್ಥಾನವು ನವವಧುವಿನಂತೆ ಅಲಂಕರಿಸಿಕೊಂಡು ಕಂಗೊಳಿಸುತ್ತಿತ್ತು.ಕರಗ ಸಾಗಿದ ಮಾರ್ಗದ ಮೂಲಕ ಭಕ್ತರು ರಾತ್ರಿ ಪೂರ್ತಿ ಜಾಗರಣೆ ಮಾಡಿ ದೇವಿಯನ್ನು ಕಣ್ತುಂಬಿಕೊಂಡರು. ಈ ಬಾರಿಯೂ ಜ್ಞಾನೇಂದ್ರ ಅವರು ಕರಗ ಹೊತ್ತಿದ್ದು, ಯಾವುದೇ ಅಡ್ಡಿ ಆತಂಕಗಳಿಲ್ಲದೆ ಉತ್ಸವ ಸುಸೂತ್ರವಾಗಿ ನೆರವೇರಿತು. ಧರ್ಮರಾಯಸ್ವಾಮಿ ದೇವಸ್ಥಾನದಿಂದ ಮಧ್ಯರಾತ್ರಿ 2.10ಕ್ಕೆ ಹೊರಟ ಕರಗವು ವಿವಿಧ ಪೇಟೆಗಳನ್ನು ಸುತ್ತಿ, ಮಸ್ತಾನ್ ಷಾ ದರ್ಗಾ, ಅಣ್ಣಮ್ಮ ದೇವಸ್ಥಾನ ಸೇರಿದಂತೆ ಒಟ್ಟು 26 ದೇವಸ್ಥಾನಗಳಿಗೆ ದರ್ಶನ ನೀಡಿ ಇಂದು ಬೆಳಿಗ್ಗೆ 9.50ಕ್ಕೆ ಮರಳಿ ದೇವಸ್ಥಾನಕ್ಕೆ ಆಗಮಿಸಿತು. ಒಟ್ಟಾರೆ, ಈ ಬಾರಿಯ ಬೆಂಗಳೂರು ಕರಗ ಮಹೋತ್ಸವ ಭಕ್ತಿಭಾವ ಮತ್ತು ಸಂಭ್ರಮದ ನಡುವೆ ಅದ್ದೂರಿಯಾಗಿ ಜರುಗಿದ್ದು, ಲಕ್ಷಾಂತರ ಭಕ್ತರು ದ್ರೌಪದಿ ಕರಗವನ್ನು ಕಣ್ತುಂಬಿಕೊಂಡರು. ಶಾಂತಿಯುತವಾಗಿ ನೆರವೇರಿದ ಕರಗ ಮಹೋತ್ಸವ. ಬೆಂಗಳೂರು,ಏ.2- ಐತಿಹಾಸಿಕ ಬೆಂಗಳೂರು ಕರಗ ಮಹೋತ್ಸವ ಶಾಂತಿಯುತವಾಗಿ ನೆರವೇ-ರಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ತಿಳಿಸಿದ್ದಾರೆ. ಈ ಸಂಜೆಯೊಂದಿಗೆ ಮಾತನಾಡಿದ ಅವರು, ಮಧ್ಯರಾತ್ರಿಯಿಂದ ಇಂದು ಬೆಳಗ್ಗೆ 9.30 ರಿಂದ 10 ಗಂಟೆಯವರೆಗೂ ಕರಗ ಮೆರವಣಿಗೆ ನಡೆದಿದೆ. ಎಲ್ಲಿಯೂ ಸಣ್ಣ ಪುಟ್ಟ ಘಟನೆ ನಡೆಯದಂತೆ ಪೊಲೀಸರು ಕರ್ತವ್ಯ ನಿರ್ವಹಿಸಿ ದ್ದಾರೆ ಎಂದು ಹೇಳಿದರು. ನಮ ಅಧಿಕಾರಿಗಳು ರೂಟ್‌ಮ್ಯಾಪ್ ಸರಿಯಾಗಿ ಮಾಡಿದ್ದರು. ಅದರಂತೆ ಪೊಲೀಸರು ಕರ್ತವ್ಯ ನಿರ್ವಹಿಸಿದ್ದಾರೆ.

## ತಾಲೂಕು ಆಡಳಿತದಿಂದ ಶಿವಶರಣೆ ಅಕ್ಕಮಹಾದೇವಿ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ತಹಶೀಲ್ದಾರ್ ಕಚೇ-ರಿಯ ಸಭಾಂಗಣದಲ್ಲಿ ತಾಲೂಕು ಆಡಳಿತ ವತಿಯಿಂದ ನಡೆದ ಶಿವಶರಣೆ ಅಕ್ಕಮಹಾದೇವಿ ಜಯಂತಿ ಕಾರ್ಯಕ್ರಮವನ್ನು ಶಿವಶರಣೆ ಅಕ್ಕಮಹಾದೇವಿ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸುವ ಮೂಲಕ ಆಚರಿಸಿ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ಶಿವಶರಣೆ ಅಕ್ಕಮಹಾದೇವಿ 12 ನೇ ಶತಮಾನದಲ್ಲಿ ಮಹಾಶಿವಶರಣೆಯಾಗಿದ್ದರು ಹಾಗೂ ಇವರು ಕನ್ನಡದಲ್ಲಿ ಚೆನ್ನಮಲ್ಲಿಕಾರ್ಜುನ ಎನ್ನುವ ಅಂಕಿತದಲ್ಲಿ ಅನೇಕ ವಚನಗಳನ್ನು ಬರೆಯುವ ಮೂಲಕ ಕನ್ನಡದ ಪ್ರಥಮ ವಚನಗಾರ್ತಿಯಾಗಿದ್ದಾರೆ.**

ಇವರ ವಚನಗಳು ಕನ್ನಡ ಸಾಹಿತ್ಯದ ಅಮೂಲ್ಯ ಕೊಡುಗೆ ನೀಡಿದ್ದಾರೆ. ಅಕ್ಕಮಹಾದೇವಿಯವರು ನಮಗೆ ಸತ್ಯ,ಶುದ್ದತೆ ಮತ್ತು ಭಕ್ತಿಯ ಮಾರ್ಗವನ್ನು ತೋರಿದ್ದಾರೆ ಎಂದು ತಿಳಿಸಿದರು. ಉಪನ್ಯಾಸಕರಾದ ಚನ್ನಬಸವ ಮಾಡಗಿರಿಯವರು ಶಿವಶರಣೆ ಅಕ್ಕಮಹಾದೇವಿಯವರ ಜೀವನ,ವಚನಗಳು, ಹಾಗೂ ಅವರು ಭೋದಿಸಿದ ತತ್ವಗಳ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು. ತಾಲೂಕು ಆಡಳಿತ ವತಿಯಿಂದ ವಿವಿಧ



ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳೆಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಗಂಗಾಧರನಾಯಕ, ಗ್ರೇಡ್-2 ತಹಶೀಲ್ದಾರ್ ಅಬ್ದುಲ್ ವಾಹಿದ್, ವಿನಾಯಕರಾವ್,ತಾಲೂಕು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಹ-ರಿಹರಪಾಟೀಲ್,ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾ.ಅಧ್ಯಕ್ಷರಾದ ಅರುಣಚಂದಾ, ಗುಮ್ಮ ಬಸವರಾಜ, ಹೆಚ್,ಮೌನೇಶಗೌಡ,ಶಿವಲಿಂಗಯ್ಯ, ಗುರುಸಿದ್ದಪ್ಪ ಕಣೂರು, ವೀರನಗೌಡ ವಕೀಲರು, ಬಸವಕೇಂದ್ರದ ಅಧ್ಯಕ್ಷರಾದ ಶರಣಬಸವ ಬೆಟ್ಟದೂರು, ಹೋಯ್ಸಳಸ್ವಾಮಿ,ಶಂಕರಪ್ಪ.ಸಂಗಮೇಶ ಮುದೋಳ್ ಸೇರಿದಂತೆ ಇನ್ನಿತರರು ಇದ್ದರು.

## ಧ್ವಜವು ಶಿಸ್ತು, ಕರ್ತವ್ಯ ನಿಷ್ಠೆ, ಕಾನೂನು ಪಾಲನೆ, ರಕ್ಷಣೆಯ ಸಂಕೇತ: ಬಸವರಾಜ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಪೊಲೀಸ್ ಇಲಾಖೆಯು ಗುರುವಾರ ರಾಯಚೂರು ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಪೊಲೀಸ್ ಧ್ವಜ ದಿನಾಚರಣೆ ಹಮ್ಮಿಕೊಂಡಿತ್ತು. ಈ ಸಂದರ್ಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ನಿವೃತ್ತ ಆರಕ್ಷಕ ಉಪ ನಿರೀಕ್ಷಕರಾದ ಬಸವರಾಜ ಅವರು ಮಾತನಾಡಿ, ಪೊಲೀಸರು ಎಲ್ಲಿ ಕರ್ತವ್ಯ ನಿರ್ವಹಿಸುತ್ತಾರೋ ಅಲ್ಲಿ ಧ್ವಜ ಇರುತ್ತದೆ. ಪೊಲೀಸ್ ಧ್ವಜದ ಗೌರವ ಎತ್ತಿ ಹಿಡಿಯುವುದು ಪೊಲೀಸರ ಕರ್ತವ್ಯ ಎಂದರು.**

ಇಂದು ಪೊಲೀಸ್ ಇಲಾಖೆಗೆ ಮಹತ್ವದ ದಿನವಾಗಿದ್ದು, 1965ರ ಎಪ್ರಿಲ್ 2ರಂದು ಕರ್ನಾಟಕದಲ್ಲಿ ಪೊಲೀಸ್ ಪಡೆ ಅಧಿಕೃತವಾಗಿ ರಚನೆಯಾದ ನೆನಪಿಗಾಗಿ ಈ ದಿನವನ್ನು ಕರ್ನಾಟಕ ರಾಜ್ಯ ಎಲ್ಲಾ ಜಿಲ್ಲಾ ಕೇಂದ್ರದಲ್ಲಿ ಆಚರಣೆಯನ್ನು ಮಾಡುತ್ತಾ ಬಂದಿವೆ. ಈ ಧ್ವಜವು ಶಿಸ್ತು, ಕರ್ತವ್ಯ ನಿಷ್ಠೆ, ಕಾನೂನು ಪಾಲನೆ ಮತ್ತು ರಕ್ಷಣೆಯ ಸಂಕೇತವಾಗಿದೆ. ಸಮಾಜದಲ್ಲಿ ಸಾರ್ವಜನಿಕರು ಮತ್ತು ಪೊಲೀಸರ ನಡುವಿನ ಬಾಂಧವ್ಯವನ್ನು ಬೆಳೆಸಲು ಅತಿ ಮುಖ್ಯವಾಗಿದೆ. ಇದನ್ನು ಪ್ರತಿ ವರ್ಷ ಪೊಲೀಸ್ ಧ್ವಜ ಟಿಕೇಟ್‌ಗಳನ್ನು ಮಾರಾಟ ಮಾಡಿ ಅದರಿಂದ ಬರುವ ಹಣವನ್ನು ಪೊಲೀಸ್ ಕಲ್ಯಾಣ ನಿಧಿಗೆ ಜಮಾ ಮಾಡಲಾಗುತ್ತದೆ ಎಂದರು.

ನಾನು 1987ರ ಫೆಬ್ರುವರಿಯಲ್ಲಿ ಪೊಲೀಸ್ ಇಲಾಖೆಯಲ್ಲಿ ಪಿ.ಸಿ, ಎಚ್.ಸಿ, ಮತ್ತು ಎ.ಎಸ್.ಐ ಮತ್ತು ಪಿ.ಎಸ್.ಐ ಹುದ್ದೆಯಲ್ಲಿ ಹಲವು



ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸಿ ದಿನಾಂಕ 28-02-2025 ರಂದು ಸಿಂಧನೂರು ನಗರ ಪೊಲೀಸ್ ಠಾಣೆಯಿಂದ ನಿವೃತ್ತಿ ಹೊಂದಿರುತ್ತೇನೆ ಎಂದರು. ಪೋಲೀಸ ಕೆಲಸವೆಂದರೆ ಅಷ್ಟು ಸುಲಭದ ಕೆಲಸವಲ್ಲ. ಇದು ದೂರದ ಬೆಟ್ಟ ಕಣ್ಣಿಗೆ ನುಣ್ಣಗೆ ಅಂದಹಾಗೆ ದೂರದಿಂದ ನೋಡುವವರಿಗೆ ಚಂದ ಕಂಡರೂ, ಒಳಗಡೆ ಕಲ್ಲು, ಮುಳ್ಳು, ಕಷ್ಟ ಇದ್ದ ಹಾಗೇ ಕೆಲವು ತೊಂದರೆಗಳು ಇರುತ್ತವೆ. ಮತ್ತು ಬಿಸಿಲು, ಗಾಳಿ ಮಳೆ ಧೂಳು ಎನ್ನದೇ ಎಲ್ಲಾ ಸಂದರ್ಭದಲ್ಲಿ ಕರ್ತವ್ಯ ನಿರ್ವಹಿಸಬೇಕಾಗಿದೆ. ಸರಕಾರಿ ಹಾಗೂ ಸಾರ್ವತ್ರಿಕ ರಜೆ ಇದ್ದಾಗ ಉಳಿದವರಿಗೆ ಹಬ್ಬ, ಹರಿದಿನ ಜಾತ್ರೆ ಸಂಭ್ರಮಗಳನ್ನು ಆಚರಿಸುತ್ತಿದ್ದರೆ ಪೋಲೀಸರು ಮಾತ್ರ ಸಾರ್ವಜನಿಕರ ರಕ್ಷಣೆ ಸಲುವಾಗಿ ತಮ್ಮ ಕುಟುಂಬದ ಮನೆ ಬಿಟ್ಟು ಕರ್ತವ್ಯ ನಿರ್ವಹಿಸುತ್ತಾರೆ. ಹಾಗೂ ಕೆಲವು ಸಮಯದಲ್ಲಿ ನೀರು, ಊಟ, ನಿದ್ದೆ ಎನ್ನುವುದು ಸರಿಯಾದ ಸಮಯಕ್ಕೆ ಸಿಗುವುದಿಲ್ಲ. ಆದರೂ ಸಹ ಪೋಲೀಸರು ಎದೆಗುಂದದೇ ತಮ್ಮ ಕರ್ತವ್ಯ ನಿರ್ವಹಿಸುತ್ತಾರೆ.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ-ರಿಗಳಾದ ಅರುಣಾಂಗ್ಶು ಗಿರಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕರ್ನಾಟಕ ರಾಜ್ಯ ಪೊಲೀಸ್ ಧ್ವಜ ದಿನಾಚರಣೆಯನ್ನು ಹಾಗೂ ನಿವೃತ್ತ ಪೊಲೀಸ್ ಅಧಿಕಾರಿಗಳ ಕಲ್ಯಾಣ ದಿನವನ್ನು ಪ್ರತಿ ವರ್ಷ ಏಪ್ರಿಲ್ 2 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಆಚರಿಸಲಾಗುತ್ತದೆ. ಪೊಲೀಸ್ ಇಲಾಖೆಯಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಯವರಿಗೆ ದಿನದ 24 ಗಂಟೆಗಳ ಕಾಲ ವಿಶ್ರಾಂತಿವಿಲ್ಲದೇ ಕರ್ತವ್ಯ ನಿರ್ವಹಿಸಿ, ಸಾರ್ವಜನಿಕರ ಆಸ್ತಿ ರಕ್ಷಣೆ ಮತ್ತು ಕಾನೂನು ಸುವ್ಯವಸ್ಥೆಯಲ್ಲಿ ತೊಡಗಿರುವ ಅಂಶ ಎಲ್ಲರಿಗೂ ತಿಳಿದಿರುವ ವಿಷಯವಾಗಿದೆ ಎಂದರು. 2025-26ನೇ ಸಾಲಿನ ಸಾಲಿನಲ್ಲಿ ಆರೋಗ್ಯ ಭಾಗ್ಯ ಯೋಜನೆಡಿಯಲ್ಲಿ ಒಟ್ಟು 227 ಜನ ನಿವೃತ್ತ ಪೊಲೀಸ್ ಅಧಿಕಾರಿ, ಸಿಬ್ಬಂದಿಯವರಿಗೆ ವೈದ್ಯಕಿಯ ಚಿಕಿತ್ಸೆಯನ್ನು ಪಡೆದುಕೊಂಡಿದ್ದಾರೆ.



2025-26ನೇ ಸಾಲಿನಲ್ಲಿ ನಿವೃತ್ತ ಪೊಲೀಸ್ ಅಧಿಕಾರಿಗಳ ನಿಧಿಯಿಂದ 82 ಜನ ನಿವೃತ್ತ ಸಿಬ್ಬಂದಿಯವರಿಗೆ ವೈದ್ಯಕೀಯ ಚಿಕಿತ್ಸೆಗಾಗಿ ಒಟ್ಟು 9,13,812ರೂ.ಗಳನ್ನು ಪಾವತಿಸಲಾಗಿದೆ ಎಂದರು. 2025-26 ಸಾಲಿನಲ್ಲಿ ನಿವೃತ್ತ ಪೊಲೀಸ್ ಅಧಿಕಾರಿ ಸಿಬ್ಬಂದಿಗಳಿಗೆ ನಿವೃತ್ತ ಪೊಲೀಸ್ ಅಧಿಕಾ-ರಿಗಳ ನಿಧಿಯಿಂದ 15 ಜನ ನಿವೃತ ಪೊಲೀಸ್ ಅಧಿಕಾರಿ, ಸಿಬ್ಬಂದಿಗಳಿಗೆ ಶವ ಸಂಸ್ಕಾರಕ್ಕಾಗಿ ಒಟ್ಟು 1,50,000 ರೂ.ಗಳನ್ನು ಪಾವತಿಸಲಾಗಿದೆ ಎಂದರು. ಸಿಬ್ಬಂದಿಯವರ ಉಪಯೋಗಕ್ಕಾಗಿ ಪೊಲೀಸ್ ಕಲ್ಯಾಣ ಮಂಟಪ, ಗ್ರಂಥಾಲಯ ಹಾಗೂ ಜಿಮ್‌ಗಳು, ಸಬ್ಸಿಡರಿ ಪೊಲೀಸ್ ಕ್ಯಾಂಟಿನ್ ಕೆಲಸ ಮಾಡುತ್ತಿವೆ. ಅಲ್ಲದೆ ಆರೋಗ್ಯ ಭಾಗ್ಯ ಯೋಜನೆಯಡಿಯಲ್ಲಿ ಅಧಿಕಾರಿ, ಸಿಬ್ಬಂದಿಗಳು ಹಾಗೂ ಅವರುಗಳ ಪತ್ನಿ, ಮಕ್ಕಳಿಗೆ ಹಾಗೂ ತಂದೆ ತಾಯಿಯವರು ಸೇರಿ ಸುಮಾರು 955 ಜನರನ್ನು ಆರೋಗ್ಯ ಭಾಗ್ಯ ಯೋಜನೆಯಡಿಯಲ್ಲಿ ಚಿಕಿತ್ಸೆಯ ಪ್ರಯೋಜನವನ್ನು ಪಡೆದುಕೊಂಡಿದ್ದಾರೆ ಎಂದರು.

ಕರ್ನಾಟಕ ರಾಜ್ಯ ಪೊಲೀಸ್ ಧ್ವಜ ದಿನಾಚರಣೆಯ ಅಂಗವಾಗಿ ಒಂದು ನಿಧಿಯನ್ನು ಮಾಡಿದ್ದು, ಈ ನಿಧಿಗಾಗಿ ಪೊಲೀಸ್ ಧ್ವಜಗಳನ್ನು ಮಾರಾಟ ಮಾಡಿ ಪೊಲೀಸ್ ಸಿಬ್ಬಂದಿಯವ-ರಿಗೆ ಮತ್ತು ಸಾರ್ವಜನಿಕರಿಂದ ಹಣವನ್ನು ಸಂಗ್ರಹಿಸಲಾಗುವುದು. ಈ ಹಣವನ್ನು ನಿವೃತ್ತ ಪೊಲೀಸ್ ಅಧಿಕಾರಿಗಳ ಹಾಗೂ ಕರ್ತವ್ಯದಲ್ಲದ್ದ ಸಿಬ್ಬಂದಿಗಳ ಕಲ್ಯಾಣ ಕಾರ್ಯಕ್ರಮಗಳಿಗೆ ಉಪಯೋಗಿಸಲಾಗುತ್ತಿದ್ದು, ಎಲ್ಲರೂ ಈ ನಿಧಿಗೆ ಸಹಾಯ ಧನವನ್ನು ನೀಡಿ ಕಲ್ಯಾಣ ಕಾರ್ಯಕ್ರಮಗಳಿಗೆ ಸಹಕರಿಸಬೇಕೆಂದರು. ಇದೇ ಸಂದರ್ಭದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಜಿ.ಹರೀಶ್, ಡಿವೈಎಸ್ಪಿ ಪ್ರಮಾನಂದ ಘೋರಕೆ, ದತ್ತಾತ್ರೇಯ ಕಾರ್ನಾಡ್, ಸಿಪಿಐಗಳಾದ ಸಾಬಯ್ಯ, ಸೋಮಶೇಖರ, ಹನುಮಂತ ನಾಯಕ, ಮಹಾದೇವ ಪಂಚಮುಖಿ, ಬಸವರಾಜ ತೇರಿ, ಈರೇಶ ನಾಯಕ, ಬಸಪ್ಪ ಬಿಳಿಗೇರಿ, ಅಮರೇಶ ಜಗರಕಲ್, ರಂಗನಾಥ ಕೋಟೆ, ಪಿಎಸ್‌ಐಗಳಾದ ತಿಮ್ಮಣ್ಣ ನಾಯಕ, ಹುಲಿಗೇಶ್, ಸಣ್ಣ ವಿರೇಶ್, ಸಿದ್ದಪ್ಪ, ಮಹಮ್ಮದ್ ಇಸಾಕ್, ಉದಯ ಕುಮಾರ್, ಬಾಹುಬಲಿ, ಶ್ರೀಕಾಂತ್, ಬೀರಣ್ಣ, ನಾರಾಯಣ ಸೇರಿದಂತೆ ಇತರರು ಇದ್ದರು. ಕಾರ್ಯಕ್ರಮದಲ್ಲಿ ವಿವಿಧ ಪೊಲೀಸ ತುಕಡಿಗಳಿಂದ ಫಥ ಸಂಚಲನ, ರಾಷ್ಟ್ರ ಧ್ವಜ ಹಾಗೂ ಪೊಲೀಸ್ ಧ್ವಜದ ಆಗಮನ, ಮುಖ್ಯ ಅತಿಥಿಗಳಿಗೆ ಸನ್ಮಾನ ಮಾಡಲಾಯಿತು. ಅಚ್ಚುಕಟ್ಟಾಗಿ ಸಂಗೀತ ವಾದ್ಯವನ್ನು ಯಂಕಪ್ಪ ಅವರ ನೇತೃತ್ವದಲ್ಲಿ ನಿರ್ವಹಣೆ ಮಾಡಲಾಯಿತು. ಕಾರ್ಯಕ್ರಮ ನಿರೂಪಣೆಯನ್ನು ಮಲ್ಲಿಕಾರ್ಜುನ ಅವರು ನಿರ್ವಹಣೆ ಮಾಡಿದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.